ಸಂಪಾದಕ:ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

PAVITRAPRAJA Daily RNI:KARKAN: 2007/22780 ದಿನಪತ್ರಿಕೆ

e-mail:pavitrapraja@gmail.com KA/SK/CTA-806/21-23 Davanagere 9141920642

ಸಂಪುಟ:18 ಸಂಚಿಕೆ: 224 ದಿನಾಂಕ: 16-07-2024 ಮಂಗಳವಾರ ಪುಟ: 4 ರೂ.2-00 ಉಪ ಸಂಪಾದಕರು: ಸುಪ್ರಿತ ಎಸ್. ಒಡೆಯರ್ ಎಂಬಿಎ Vol:18 Issuse:224 Date:16-07-2024 Tuesday page:4 Rs:2-00 SubEditor: Supritha Wadeyar

# ಪ್ರಯಾಣಿಕರೇ ಗಮನಿಸಿ ವಿವಿಧ ರೈಲುಗಳ ಸಂಚಾರದಲ್ಲಿ ವ್ಯತ್ಯಯ, ರದ್ದಾದ ರೈಲುಗಳ ಪಟ್ಟಿ

**ಬೆಂಗಳೂರು,**

ನೈಋತ್ಯ ರೈಲ್ವೆ ವ್ಯಾಪ್ತಿಯಲ್ಲಿ ಹಲವು ರೈಲುಗಳ ಸಂಚಾರವು ಎಂದಿನಂತೆ ಇರದೇ ರದ್ದುಗೊಂಡಿವೆ. ಮುಂದಿನ ಒಂದು ವಾರದಲ್ಲಿ ಎರಡು ದಿನ ತುರ್ತು ಕಾಮಗಾರಿ ಪ್ರಯುಕ್ತ ರೈಲುಗಳ ಸಂಚಾರದಲ್ಲಿ ವ್ಯತ್ಯಯವಾಗಿದ್ದು, ಪ್ರಯಾಣಿಕರು ಗಮನಿಸಿ ಸಂಚರಿಸಬೇಕು ಎಂದು ನೈಋತ್ಯ ರೈಲ್ವೆ ವಲಯದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ನೈಋತ್ಯ ರೈಲ್ವೆ ವಲಯವು ರದ್ದಾದ, ಭಾಗಶಃ ರದ್ದಾದ ರೈಲುಗಳು, ನಿಲುಗಡೆ ರದ್ದಿನ ರೈಲುಗಳು, ಕಾರಣ, ದಿನಾಂಕ ಮತ್ತು ಸಮಯದ ಪಟ್ಟಿ ನೀಡಿದ್ದಾರೆ. ಅದರ ಮಾಹಿತಿ ಇಲ್ಲಿದೆ.

ನಿಟ್ಟೂರು ಮತ್ತು ಸಂಪಿಗೆ ರಸ್ತೆ ನಿಲ್ದಾಣಗಳ ನಡುವಿನ ಲೆವೆಲ್ ಕ್ರಾಸಿಂಗ್ (62) ಕಾಮಗಾರಿ ಜುಲೈ 18 ಮತ್ತು 25 ರಂದು ಕೈಗೆತ್ತಿಕೊಳ್ಳಲಾಗುತ್ತಿದೆ. ಹೀಗಾಗಿ ಈ ಮಾರ್ಗದಲ್ಲಿ ಓಡಾಡುವ ವಿವಿಧ ರೈಲುಗಳ ಸಂಚಾರ ರದ್ದೊಗೊಳಿಸಲಾಗಿದೆ.

### ರದ್ದಾದ ರೈಲುಗಳು ಮತ್ತು ಗಾಡಿ ಸಂಖ್ಯೆ ವಿವರ

ತುಮಕೂರು–ಚಾಮರಾಜನಗರ ರೈಲು (ಸಂಖ್ಯೆ 07346), ಚಾಮರಾಜನಗರ–ಮೈಸೂರು ರೈಲು (ಸಂಖ್ಯೆ07328), ಚಾಮರಾಜನಗರ–ಯಶವಂತಪುರ ರೈಲು (ಸಂಖ್ಯೆ 16239), ಯಶವಂತಪುರ–ಚಾಮರಾಜನಗರ ರೈಲು (ಗಾಡಿ ಸಂಖ್ಯೆ 16240), ತುಮಕೂರು– ಕೆಎಸ್ಆರ್ ಬೆಂಗಳೂರು ರೈಲು (ಸಂಖ್ಯೆ 06576), ಕೆಎಸ್ಆರ್ಬೆಂಗಳೂರಿನಿಂದ ತುಮಕೂರಿಗೆ ಹೊರಡುವ ರೈಲು (ಸಂಖ್ಯೆ



06575), ಶಿವಮೊಗ್ಗ–7ಟೌನ್–9 ಯಶವಂತಪುರ ತೆರಳುವ (ಸಂಖ್ಯೆ 16580) ರೈಲುಗಳನ್ನು ಮುಂದಿನ ಜುಲೈ 18 ಮತ್ತು 25 ರಂದು ಸಂಚಾರ ನಡೆಸುವುದಿಲ್ಲ ಎಂದು ತಿಳಿಸಲಾಗಿದೆ.

### ಭಾಗಶಃ ರದ್ದಾದ ರೈಲುಗಳು ಯಾವವು?

ತುರ್ತು ರೈಲ್ವೆ ಕ್ರಾಸಿಂಗ್ ಕಾಮಗಾರಿ ಸಂಬಂಧ ಜುಲೈ 18 ಮತ್ತು 25 ರಂದು ಬೆಂಗಳೂರು ಮೆಜೆಸ್ಟಿಕ್ (ಏಖಖ) ರೈಲು ನಿಲ್ದಾಣದಿಂದ ತುಮಕೂರಿಗೆ ಹೊರಡುವ (ಸಂಖ್ಯೆ 06571/06572) ರೈಲುಗಳನ್ನು ಹಿರೇಹಳಿ – ತುಮಕೂರು ನಡುವೆ ರಸ್ತೆ ರದ್ದುಗೊಳಿಸಲಾಗಿದೆ. ಇನ್ನೂ ಅದೇ ರೀತಿ ತಾಳಗುಪ್ಪ–ಕೆಎಸ್ಆರ್ಬೆಂಗಳೂರು ರೈಲು (ಸಂಖ್ಯೆ 20652), ಕೆಎಸ್ ಬೆಂಗಳೂರು–ಧಾರವಾಡ–ಕೆಎಸ್ಆರ್ ಬೆಂಗಳೂರು ರೈಲು (ಸಂಖ್ಯೆ 12725/12726) ಮತ್ತು ಅರಸೀಕೆರೆ–ಕೆಎಸ್ ಆರ್ ಬೆಂಗಳೂರು ನಿಲ್ದಾಣಗಳ ನಡುವಿನ ರೈಲನ್ನು ರದ್ದುಗೊಳಿಸಲಾಗಿದೆ.

### ರೈಲು ಮಾರ್ಗ ಬದಲಾವಣೆ ಮಾಹಿತಿ

ಜುಲೈ 17, 24 ರಂದು ವಾಸ್ಕೋಡ ಗಾಮಾದಿಂದ ಹೊರಡುವ ರೈಲು (ಸಂ–ಖ್ಯೆ 17310) ವಾಸ್ಕೋಡ ಗಾಮಾ–ಯಶವಂತಪುರ ರೈಲು ಅರಸೀಕೆರೆ, ಹಾಸನ, ನೆಲಮಂಗಲ, ಯಶವಂತಪುರ ಮಾರ್ಗದ ಮೂಲಕ ಸಂಚರಿಸಲಿದೆ. ಹೀಗಾಗಿ ತಿಪಟೂರು ಮತ್ತು ತುಮಕೂರು ನಿಲ್ದಾಣಗಳಲ್ಲಿ ನಿಲುಗಡೆ ಆಗುವುದಿಲ್ಲ ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

ಅದೇ ರೀತಿ ಜುಲೈ 18, 25 ರಂದು ಹೊರಡುವ ಮೈಸೂರು– ವಾರಣಾಸಿ ರೈಲು (ಸಂಖ್ಯೆ 22687), ಯಶವಂತಪುರ–ಜೈಪುರ ರೈಲು (ಸಂಖ್ಯೆ 82653) ರೈಲುಗಳು ಯಶವಂತಪುರ, ನೆಲಮಂಗಲ, ಹಾಸನ, ಅರಸೀಕೆರೆ ಮಾರ್ಗದ ಮೂಲಕ ಸಂಚರಿಸಲಿವೆ.

ಆದರೆ ಈ ರೈಲುಗಳು ತುಮಕೂರು ನಿಲ್ದಾಣದಲ್ಲಿ ನಿಲುಗಡೆ ನೀಡುವುದಿಲ್ಲ.

ಮೈಸೂರು–ಬೆಳಗಾವಿ (ಸಂಖ್ಯೆ 17326) ರೈಲು ಯಶವಂತಪುರ, ನೆಲಮಂಗಲ, ಹಾಸನ, ಅರಸೀಕೆರೆ ಮಾರ್ಗದ ಮೂಲಕ ಸಂಚರಿಸಲಿದೆ. ತಿಪಟೂರು ಮತ್ತು ತುಮಕೂರು ನಿಲ್ದಾಣಗಳಲ್ಲಿ ನಿಲುಗಡೆ ಇಲ್ಲ. ಮೈಸೂರು–ಉದಯಪುರ ಸಿಟಿ ರೈಲು (ರೈಲು 19668) ಕೆಎಸ್ಆರ್ ಬೆಂಗಳೂರು, ಯಶವಂತಪುರ, ನೆಲಮಂಗಲ, ಹಾಸನ, ಅರಸೀಕೆರೆ, ದಾವಣಗೆರೆ ಮೂಲಕ ಪ್ರಯಾಣ ಸೇವೆ ನೀಡಲಿದೆ.

# ಅಂಗನವಾಡಿ ಕಾರ್ಯಕರ್ತರಿಗೆ ಶೀಘ್ರದಲ್ಲೇ ಗುಡ್ ನ್ಯೂಸ್



**ಬೆಂಗಳೂರು,**

ಶೀಘ್ರದಲ್ಲೇ ಅಂಗನವಾಡಿ ಕಾರ್ಯಕರ್ತರಿಗೆ ಶುಭ ಸುದ್ದಿ ಸಿಗಲಿದೆ. ಅಂಗನವಾಡಿ ಕಾರ್ಯಕರ್ತರಿಗೆ ಇನ್ಸುರೆನ್ಸ್ ನೀಡುವ ಕುರಿತು ಶೀಘ್ರವೇ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜೊತೆ ಚರ್ಚೆ ನಡೆಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಈ ಕುರಿತು ಮಾಹಿತಿ ನೀಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಅಂಗನವಾಡಿ ಕಾರ್ಯಕರ್ತರಿಗೆ ಗೌರವ ಧನ ಹೆಚ್ಚಳದ ಬಗ್ಗೆಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ–ಗೆ ಚರ್ಚಿಸಿದ್ದು, ಶೀಘ್ರವೇ ಕಾರ್ಯರೂಪಕ್ಕೆ ತರುವ ಕೆಲಸ ಆಗಲಿದೆ ಎಂದು ತಿಳಿಸಿದರು.

ಇನ್ನೂ ಮಂಗಳೂರು ಹೊರವಲಯದ ಮೂಡುಶೆಡ್ಡೆ–ಶಿವನಗರದಲ್ಲಿರುವ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಮಹಿಳಾ ಪೂರಕ ಪೌಷ್ಟಿಕ ಆಹಾರ ತಯಾರಿಕಾ ಕೇಂದ್ರ (ಎಂಎಸ್‌ಪಿಸಿ) ಕ್ಕೆ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಅಂಗನವಾಡಿಗಳಿಗೆ ಪೂರೈಕೆಯಾಗುವ ಆಹಾರ ಆಹಾರ ಸಾಮಗ್ರಿಗಳ ಗುಣಮಟ್ಟವನ್ನು ಸಚಿವರು ಪರೀಕ್ಷಿಸಿದರು. ಕೇಂದ್ರದ ಉದ್ಯೋಗನಿರತ ಮಹಿಳೆಯರಿಂದಲೇ ಆಹಾರ ಸಾಮಗ್ರಿಗಳ ತಯಾರಿಕೆಯ ಬಗ್ಗೆ ಮಾಹಿತಿ ಪಡೆದರು. ಪುಷ್ಟಿ ನ್ಯೂಟ್ರಿಮಿಕ್ಸ್, ಹಾಲಿನ ಪುಡಿ ಮತ್ತಿತರ ಆಹಾರ ಸಾಮಗ್ರಿಗಳ ಗುಣಮಟ್ಟವನ್ನು ಸಚಿವರು ಪರೀಕ್ಷಿಸಿದರಲ್ಲದೇ, ಉತ್ಪಾದನಾ ಆಹಾರ ಸಾಮಗ್ರಿಗಳ ಬಗ್ಗೆ ಸ್ಥಳದಲ್ಲೇ ಇದ್ದ ಶಿಶು ಅಭಿವೃದ್ಧಿ ಯೋಜನಾ ಅಧಿಕಾರಿಯಿಂದ ಮಾಹಿತಿ ಪಡೆದರು.

–3ನೇ ಪುಟಕ್ಕೆ


# ಸರ್ಕಾರಿ ನೌಕರರು ಈ ಹಿಂದೆ ಮುಷ್ಕರ ನಡೆಸಿದಾಗ ಏನಾಗಿತ್ತು?

**ಬೆಂಗಳೂರು,**

ಕರ್ನಾಟಕದ ಸರ್ಕಾರಿ ನೌಕರರು ರಾಜ್ಯದ ಕಾಂಗ್ರೆಸ್ ಸರ್ಕಾರ ಕೆ. ಸುಧಾಕರ್ ರಾವ್ ನೇತೃತ್ವದ ರಾಜ್ಯ 7ನೇ ವೇತನ ಆಯೋಗದ ವರದಿ ಶಿಫಾರಸು ಜಾರಿಗೊಳಿಸಿಲ್ಲ ಎಂದು ಅಸಮಾಧಾನಗೊಂಡಿದ್ದಾರೆ. ಸೋಮವಾರ ಸಂಜೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ನೌಕರರಿಗೆ ಸಿಹಿಸುದ್ದಿ ಸಿಗಲಿದೆಯೆ? ಕಾದು ನೋಡಬೇಕಿದೆ.

7ನೇ ವೇತನ ಆಯೋಗದ ವರದಿ ಜಾರಿಗೊಳಿಸಲು ವಿಳಂಬ ಮಾಡುತ್ತಿರುವ ಸರ್ಕಾರದ ವಿರುದ್ಧ ಅಸಮಾಧಾನಗೊಂಡಿರುವ ನೌಕರರು ಅನಿರ್ಧಿಷ್ಟಾವಧಿ ಮುಷ್ಕರದ ಕರೆಯನ್ನು ನೀಡಿದ್ದಾರೆ. ಸರ್ಕಾರ ವರದಿ ಜಾರಿ ಬಗ್ಗೆ ತೀರ್ಮಾನವನ್ನು ಕೈಗೊಳ್ಳದಿದ್ದರೆ ಜುಲೈ ಅಂತ್ಯ ಅಥವ ಆಗಸ್ಟ್ ಮೊದಲ ವಾರದಲ್ಲಿ ಅನಿರ್ಧಿಷ್ಟಾವಧಿ ಮುಷ್ಕರ ನಡೆಸುವ ನಿರೀಕ್ಷೆ ಇದೆ.

ಸರ್ಕಾರಿ ನೌಕರರು ಅನಿರ್ಧಿಷ್ಟಾವಧಿ ಮುಷ್ಕರ ನಡೆಸುತ್ತಿರುವುದು ಇದೇ ಮೊದಲಲ್ಲ. 2023ರ ಮಾರ್ಚ್ 1ರಂದು 7ನೇ ವೇತನ ಆಯೋಗದ ಶಿಫಾರಸು ಜಾರಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ



ಕರ್ನಾಟಕದ ಸರ್ಕಾರಿ ನೌಕರರು ಅನಿರ್ಧಿಷ್ಟಾವಧಿ ಮುಷ್ಕರ ಆರಂಭಿಸಿದ್ದರು. ಆದರೆ ಸರ್ಕಾರ ನೌಕರರ ವೇತನವನ್ನು ಶೇ 17ರಷ್ಟು ಏರಿಕೆ ಮಾಡುವ ಘೋಷಣೆ ಮಾಡಿದ ಬಳಿಕ ಮುಷ್ಕರ ವಾಪಸ್ ಪಡೆದಿದ್ದರು.

–3ನೇ ಪುಟಕ್ಕೆ

# ಬೆಂಗಳೂರಲ್ಲಿ ಸರ್ಕಾರಿ ನೌಕರರ ಪ್ರತಿಭಟನೆ

7ನೇ ರಾಜ್ಯ ವೇತನ ಆಯೋಗದ ವರದಿ ಶಿಫಾರಸು ಜಾರಿಗೆ ಆಗ್ರಹಿಸಿ ಕರ್ನಾಟಕದ ಸರ್ಕಾರಿ ನೌಕರರು ಪ್ರತಿಭಟನೆ ನಡೆಸಿದರು.

ಕೆ. ಸುಧಾಕರ್ ರಾವ್ ನೇತೃತ್ವದ ರಾಜ್ಯ 7ನೇ ವೇತನ ಆಯೋಗದ ವರದಿ ಶಿಫಾರಸು ಜಾರಿಗೊಳಿಸಲು ರಾಜ್ಯ ಸರ್ಕಾರವನ್ನು ಒತ್ತಾಯಿಸಲು ಸರ್ಕಾರಿ ನೌಕರರು ಬೆಂಗಳೂರಿನಲ್ಲಿ ಸಾಂ–ಕೇತಿಕ ಪ್ರತಿಭಟನೆ ನಡೆಸಿದರು. ಸರ್ಕಾರಿ ನೌಕರರ ಸಂಘ, ಸಚಿವಾಲಯ ನೌಕರರ ಸಂಘ ಬೆಂಗಳೂರು ಇವರ ನೇತೃತ್ವದಲ್ಲಿ ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಸರ್ಕಾರಿ ನೌಕರರು ಸಾಂ–ಕೇತಿಕ ಪ್ರತಿಭಟನೆಯನ್ನು ನಡೆಸಿ ಬೇಡಿಕೆಗಳನ್ನು ಈಡೇರಿಸಿ ಎಂದು ಒತ್ತಾಯಿಸಿದರು.

ಸರ್ಕಾರಿ ನೌಕರರು 7ನೇ ವೇತನ ಆಯೋಗದ ವರದಿ ಜಾರಿಗೊಳಿಸಲು ವಿಳಂಬ ಮಾಡುತ್ತಿರುವ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ತಮ್ಮ ಬೇಡಿಕೆ ಈಡೇರಿಸದಿದ್ದರೆ ಅನಿರ್ಧಿಷ್ಟಾವಧಿ ಮುಷ್ಕರವನ್ನು ನಡೆಸುತ್ತೇವೆ ಎಂದು ಕರೆಯನ್ನು ನೀಡಿದ್ದಾರೆ ನೂತನ ಪಿಂಚಣಿ ಯೋಜನೆಯನ್ನು ಸಹ ರಾಜ್ಯ ಸರ್ಕಾರಿ ನೌಕರರು ವಿರೋಧಿಸುತ್ತಿದ್ದಾರೆ. ಸರ್ಕಾರ ಈ ಪಿಂಚಣಿ ಯೋಜನೆ ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿಗೊಳಿಸಬೇಕು ಎಂದು ಸರ್ಕಾರಿ ನೌಕರರು ಬೇಡಿಕೆಯನ್ನು ಇಟ್ಟಿದ್ದಾರೆ.

ಬೆಂಗಳೂರಿನಲ್ಲಿ ಸರ್ಕಾರಿ ನೌಕರರ ಸಂಘ, ಸಚಿವಾಲಯ ನೌಕರರ ಸಂಘ ಬೆಂಗಳೂರು ಇವರ ನೇತೃತ್ವದಲ್ಲಿ ನಡೆದ ಸಾಂಕೇತಿಕ ಪ್ರತಿಭಟನೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ. ಎಸ್. ಷಡಾಕ್ಷರಿ, ಹಲವು ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಹಣಕಾಸು ಸಚಿವ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಚ್ 16 ರಂದು ಕೆ. ಸುಧಾಕರ್ ರಾವ್ ನೇತೃತ್ವದ ರಾಜ್ಯ 7ನೇ ವೇತನ ಆಯೋಗ ವರದಿ ಸ್ವೀಕರಿಸಿದ್ದಾರೆ. ಆದರೆ ಸರ್ಕಾರ ಇನ್ನೂ ವರದಿಯಲ್ಲಿನ ಶಿಫಾರಸು ಜಾರಿಗೊಳಿಸಿಲ್ಲ ಎಂಬುದು ನೌಕರರ ಆಕ್ರೋಶಕ್ಕೆ ಕಾರಣವಾಗಿದೆ.




# ಮೈಸೂರು ದಸರಾ ಅಂಬಾರಿ ಆನೆ ಅರ್ಜುನ ಸ್ಮಾರಕ ನಿರ್ಮಾಣಕ್ಕೆ ಚಾಲನೆ

ಹಾಸನ ಜಿಲ್ಲೆಯ ಸಕಲೇಶಪುರದಲ್ಲಿ ಮೈಸೂರು ದಸರಾದಲ್ಲಿ ಅಂಬಾರಿ ಹೊತ್ತಿದ್ದ ಆನೆ ಅರ್ಜುನ ಸಾವನ್ನಪ್ಪಿದ ಜಾಗದಲ್ಲಿ ಸ್ಮಾರಕ ನಿರ್ಮಾಣಕ್ಕೆ ಶಂಕು ಸ್ಥಾಪನೆ ಮಾಡಲಾಗಿದೆ.

ಮೈಸೂರು ದಸರಾದಲ್ಲಿ 8 ವರ್ಷಗಳ ಕಾಲ ಚಿನ್ನದ ಅಂಬಾರಿ ಹೊತ್ತಿದ್ದ ದಸರಾ ಅನೆ ಅರ್ಜುನ ಸಾವನ್ನಪ್ಪಿದ ಜಾಗದಲ್ಲಿ ಸ್ಮಾರಕ ನಿರ್ಮಾಣಕ್ಕೆ ಶಂಕು ಸ್ಥಾಪನೆ ಮಾಡಲಾಗಿದೆ. ಕಾಡಾನೆ ಹಿಡಿಯುವ ಕಾರ್ಯಾಚರಣೆ ನಡೆಸುವ ವೇಳೆ ಅರ್ಜುನ ಆನೆ ಮೃತಪಟ್ಟಿತ್ತು.

ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಯಳಸೂರು ಬಳಿ ಅರ್ಜುನ ಆನೆ ಸ್ಮಾರಕ ನಿರ್ಮಾಣಕ್ಕೆ ಅರಣ್ಯ ಸಚಿವ ಈಶ್ವರ ಖಂಡ್ರೆ ಶಂಕುಸ್ಥಾಪನೆ ಮಾಡಿದರು. ಸಚಿವರಾದ ಕೆ. ಎನ್. ರಾಜಣ್ಣ, ಸಂಸದ ಶ್ರೇಯಸ್ ಎಂ. ಪಟೇಲ್, ಶಾಸಕ ಶಿವಲಿಂಗೇ ಗೌಡ ಮುಂತಾದವರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ ವಿಶ್ವ ವಿಖ್ಯಾತ ಮೈಸೂರು ದಸರಾದಲ್ಲಿ ಅಂಬಾರಿ ಹೊತ್ತಿದ್ದ ಅರ್ಜುನ ಆನೆಯು ಸಾವನ್ನಪ್ಪಿದ ಜಾಗದಲ್ಲಿ ಸ್ಮಾರಕ ನಿರ್ಮಾಣ ಮಾಡುತ್ತಿದೆ. 1990 ರಿಂದ 2023 ತನಕ ಮೈಸೂರು ದಸರಾದಲ್ಲಿ ಭಾಗವಹಿಸಿದ್ದ ಅರ್ಜುನ ಆನೆ 8 ವರ್ಷ ಚಾಮುಂಡೇಶ್ವರಿ ದೇವಿ ಇರುವ ಚಿನ್ನದ ಅಂಬಾರಿ ಹೊತ್ತು ಸಾಗಿತ್ತು.

2023ರ ಡಿಸೆಂಬರ್‌ನಲ್ಲಿ ಹಾಸನದಲ್ಲಿ ಪುಂಡಾನೆ ಹಿಡಿಯುವ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದ ಅರ್ಜುನ ಆನೆ ಕಾಡಾನೆಗಳ ಜೊತೆಗಿನ ಕಾದಾಟದಲ್ಲಿ ಮಾವುತರು, ಅರಣ್ಯ ಇಲಾಖೆ ಅಧಿಕಾರಿಗಳ ಪ್ರಾಣ ಉಳಿಸಿ ವೀರ ಮರಣ ಹೊಂದಿದ ಸ್ಥಳದಲ್ಲಿಯೇ ಸ್ಮಾರಕ ನಿರ್ಮಾಣ ಮಾಡಲಾಗುತ್ತಿದೆ.ಅರ್ಜುನ ಆನೆ ಸ್ಮಾರಕ ನಿರ್ಮಾಣ ಮಾಡುವ ವಿಚಾರ ಭಾರೀ ಚರ್ಚೆಗೆ ಕಾರಣವಾಗಿತ್ತು. ನಟ ದರ್ಶನ್ ಸಹ ಸ್ಮಾರಕ ನಿರ್ಮಾಣದ ಬಗ್ಗೆ ಧ್ವನಿ ಎತ್ತಿದ್ದರು. ಸರ್ಕಾರ ಸ್ಮಾರಕ ಮಾಡಲಿಲ್ಲ ಎಂದರೆ ತಾವೇ ಸ್ಮಾರಕ ನಿರ್ಮಾಣ ಮಾಡುತ್ತೇವೆ ಎಂದು ಹೇಳಿದ್ದರು



# ಬಾಳಿಗಾ ಕೊಲೆ ಆರೋಪಿ ನರೇಶ್ ಶೆಣೈ ಮೇಲೆ ಮತ್ತೊಂದು ಎಫ್.ಐ.ಆರ್

ಆರ್.ಟಿ.ಐ ಕಾರ್ಯಕರ್ತ ವಿನಾಯಕ್ ಬಾಳಿಗಾ ಕೊಲೆ ಪ್ರಕರಣದ ಪ್ರಮುಖ ಆರೋಪಿ, ಯುವ ಬ್ರಿಗೇಡ್ ಕಾರ್ಯಕರ್ತ ಹಾಗೂ ಉದ್ಯಮಿ ನರೇಶ್ ಶೆಣೈ ಮೇಲೆ ಮತ್ತೊಂದು ಎಫ್.ಐ.ಆರ್‌ದಾಖಲಾಗಿದೆ.

ಮಂಗಳೂರು, ಆರ್.ಟಿ.ಐ ಕಾರ್ಯಕರ್ತ ವಿನಾಯಕ್ ಬಾಳಿಗಾ ಕೊಲೆ ಪ್ರಕರಣದ ಪ್ರಮುಖ ಆರೋಪಿ, ಯುವ ಬ್ರಿಗೇಡ್ ಕಾರ್ಯಕರ್ತ ಹಾಗೂ ಉದ್ಯಮಿ ನರೇಶ್ ಶೆಣೈ ಮೇಲೆ ಮತ್ತೊಂದುಎಫ್.ಐ.ಆರ್ ದಾಖಲಾಗಿದೆ.

ಭರತ್ ಕಾಮತ್ ಎಂಬುವವರಿಗೆ ಕೊಲೆ ಬೆದರಿಕೆ ಹಾಕಿದ್ದಾರೆ ಎನ್ನುವ ಹಿನ್ನಲೆಯಲ್ಲಿ ಮಂಗಳೂರಿನ ಬಂದರು ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಲಾಗಿದೆ.

ಮಂಗಳೂರಿನ ಡೊಂಗರಕೇರಿಯ ಮೈದಾನಕ್ಕೆ ಬರುವಂತೆ ಹೇಳಿ, ಕಾರನ್ನು ಅಡ್ಡಗಟ್ಟಿ ನನಗೆ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಭರತ್ ಕಾಮತ್ ಎಂಬುವವರು ಇಂದು (ಮಾರ್ಚ್ 14) ಸಂಜೆ ಆರು ಗಂಟೆ ದೂರು ನೀಡಿದ್ದಾರೆ. ದೂರಿನ ಆಧಾರದ ಮೇಲೆ ನರೇಶ್ ಶೆಣೈ ವಿರುದ್ಧ ಐಪಿಸಿ ಸೆಕ್ಷನ್ 341 ಹಾಗೂ 506 ಅಡಿಯಲ್ಲಿ ಎಫ್.ಐ.ಆರ್ ದಾಖಲಿಸಲಾಗಿದೆ," ಎಂದು ಬಂದರು ಪೊಲೀಸ್ ಠಾಣೆಯ ಮೂಲಗಳು ಮಾಹಿತಿ ನೀಡಿದ್ದಾರೆ.[ಇಬ್ಬರ ಬಾಳಿಗೆ ಬೆಳಕಾದ ವಿನಾಯಕ ಬಾಳಿಗ ತಾಯಿ ಕಣ್ಣು!]

ಮಂಗಳೂರಿನ ಡೊಂಗರಕೇರಿಯ ಮೈದಾನಕ್ಕೆ ಬರುವಂತೆ ಹೇಳಿ, ಕಾರನ್ನು ಅಡ್ಡಗಟ್ಟಿ ನನಗೆ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಭರತ್ ಕಾಮತ್ ಎಂಬುವವರು ಇಂದು ಸಂಜೆ ಆರು ಗಂಟೆ ದೂರು ನೀಡಿದ್ದಾರೆ. ದೂರಿನ ಆಧಾರದ ಮೇಲೆ ನರೇಶ್ ಶೆಣೈ ವಿರುದ್ಧ ಐಪಿಸಿ ಸೆಕ್ಷನ್ 341 ಹಾಗೂ 506 ಅಡಿಯಲ್ಲಿ ಎಫ್.ಐ.ಆರ್ ದಾಖಲಿಸಲಾಗಿದೆ," ಎಂದು ಬಂದರು ಪೊಲೀಸ್ ಠಾಣೆಯ ಮೂಲಗಳು ಮಾಹಿತಿ ನೀಡಿದ್ದಾರೆ.[ಇಬ್ಬರ ಬಾಳಿಗೆ ಬೆಳಕಾದ ವಿನಾಯಕ ಬಾಳಿಗ ತಾಯಿ ಕಣ್ಣು!]

ಈ ಹಿಂದೆ ಅಯ್ಯಪ್ಪ ಸ್ವಾಮಿ ದೇವರಲ್ಲ, ದೈವ ಎಂದು ಕಾಶೀ ಮಠದ ಸಂಯಮೀಂದ್ರ ತೀರ್ಥರು ಹೇಳಿಕೆ ನೀಡಿದ್ದರು ಎನ್ನಲಾಗಿದೆ. ಈ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿ ಭರತ್ ಕಾಮತ್ ಸಂಯಮೀಂದ್ರರ ವಿರುದ್ಧ ಪ್ರಕರಣ ದಾಖಲಿಸಿದ್ದರು ಎಂದು ಹೇಳಲಾಗಿದೆ.

ಈ ಸಂಬಂಧ "ಕಾಶೀ ಮಠದ ಸ್ವಾಮೀಜಿಗಳ ಪ್ರಕರಣದಲ್ಲಿ ನೀನು ಅಷ್ಟರ ಮಟ್ಟಿಗೆ ಮುಂದುವರಿದಿದ್ದೀಯ? ಎಂದು ಪ್ರಶ್ನಿಸಿ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಭರತ್ ದೂರಿನಲ್ಲಿ ಉಲ್ಲೇಖಿಸಿದ್ದಾರೆ," ಎಂದು ಪೊಲೀಸ್ ಮೂಲಗಳು ಹೇಳಿವೆ. ನರೇಶ್ ಶೆಣೈ ಈಗಾಗಲೇ ವಿನಾಯಕ್ ಬಾಳಿಗಾ ಕೊಲೆ ಪ್ರಕರಣದಲ್ಲಿ ವಿಚಾರಣೆ ಎದುರಿಸುತ್ತಿದ್ದಾರೆ. ಇದೀಗ ಅವರ ಮೇಲೆ ಮತ್ತೊಂದು ಕೊಲೆಯ ಬೆದರಿಕೆಯ ದೂರು ದಾಖಲಾದಂತಾಗಿದೆ.

# ಪ್ರವಾಸಿ ವಾಹನಗಳ ತಪಾಸಣೆ: ಚಿಕ್ಕಮಗಳೂರು ಪ್ರವಾಸ, ಪೊಲೀಸರ ಸಲಹೆಗಳು

**ಚಿಕ್ಕಮಗಳೂರು,**

ನೈಋತ್ಯ ಮುಂಗಾರು ಮಳೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಬ್ಬರಿಸುತ್ತಿದೆ. ಈ ಸಮಯದಲ್ಲಿ ಪ್ರಕೃತಿ ಸೌಂದರ್ಯ ಸವಿಯಲು ಜಿಲ್ಲೆಗೆ ಆಗಮಿಸುವ ಪ್ರವಾಸಿಗರ ಸಂಖ್ಯೆಯೂ ಹೆಚ್ಚಿದೆ. ಆದರೆ ಕೆಲವು ಪ್ರವಾಸಿಗರಿಂದ ಉಳಿದವರಿಗೆ ಕಿರಿಕಿರಿ ಉಂಟಾಗುತ್ತಿದೆ. ಆದ್ದರಿಂದ ಜಿಲ್ಲಾ ಪೊಲೀಸರು ಪ್ರವಾಸಿ ವಾಹನಗಳ ತಪಾಸಣೆ ಆರಂಭಿಸಿದ್ದಾರೆ.




ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ಮತ್ತು ಚಿಕ್ಕಮಗಳೂರು ಅಡ್ವೆಂಚರ್ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಮುಳ್ಳಯ್ಯನಗಿರಿಗೆ ಹೋಗುವ ರಸ್ತೆಯಲ್ಲಿರುವ ಕೈಮರ ಚೆಕ್‌ಪೋಸ್ಟ್‌ನಲ್ಲಿ ಎಸ್‌ಪಿ ಡಾ. ವಿಕ್ರಮ ಅಮಟೆ ನೇತೃತ್ವದಲ್ಲಿ ಪ್ರವಾಸಿ ವಾಹನಗಳ ತಪಾಸಣೆ ನಡೆಸಲಾಯಿತು. ಪ್ಲಾಸ್ಟಿಕ್, ಮದ್ಯ ಮತ್ತು ತಂಬಾಕು ಉತ್ಪನ್ನಗಳಿಗಾಗಿ ಹುಡುಕಾಟ ನಡೆಸಲಾಯಿತು. ತಪಾಸಣೆ ವೇಳೆಯಲ್ಲಿ ಕರ್ನಾಟಕ ಪೊಲೀಸ್ ಆಕ್ಟ್ ಅಡಿಯಲ್ಲಿ 86 ಲಘು ಪ್ರಕರಣಗಳು, ಅಬಕಾರಿ ಕಾಯ್ದೆಯಡಿಯಲ್ಲಿ 1 ಪ್ರಕರಣ ಮತ್ತು ಸಂಚಾರಿ ನಿಯಮ ಉಲ್ಲಂಘನೆ ವಿರುದ್ಧ 6 ಪ್ರಕರಣಗಳನ್ನು ದಾಖಲಿಸಲಾಗಿದೆ. ಇಂತಹ ಕಾರ್ಯಾಚರಣೆಯನ್ನು ಜಿಲ್ಲೆಯ ಇತರ ಪ್ರವಾಸಿ ಸ್ಥಳಗಳಲ್ಲಿಯೂ ಸಹ ನಡೆಸಲಾಗುತ್ತಿದೆ ಎಂದು ಪೊಲೀಸರು ಎಚ್ಚರಿಕೆ ನೀಡಿದ್ದಾರೆ.

ಜಿಲ್ಲೆಯಾದ್ಯಂತ ಕೆ. ಪಿ. ಆಕ್ಟ್ ಮತ್ತು ಸಂಚಾರಿ ನಿಯಮ ಉಲ್ಲಂಘನೆ ವಿರುದ್ಧ 225 ಪ್ರಕರಣಗಳು, ಮದ್ಯಪಾನ ಮಾಡಿ ವಾಹನ ಚಲಾಯಿಸುತ್ತಿದ್ದ ವಿರುದ್ಧ 2 ಪ್ರಕರಣಗಳು, ಕೋಟ್ಪಾ ಕಾಯ್ದೆಯಡಿಯಲ್ಲಿ 10 ಪ್ರಕರಣಗಳು ಮತ್ತು ಅಬಕಾರಿ ಕಾಯ್ದೆಯಡಿಯಲ್ಲಿ 2 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ ಎಂದು ಪೊಲೀಸರು ಹೇಳಿದ್ದಾರೆ.

### ಪ್ರವಾಸಿಗರಿಗೆ ಸಲಹೆಗಳು

* ಪ್ರವಾಸಿ ಸ್ಥಳಗಳಲ್ಲಿ ಸಾರ್ವಜನಿಕರಿಗೆ ಕಿರಿಕಿರಿ, ತೊಂದರೆ ಉಂಟುಮಾಡುವ ಯಾವುದೇ ರೀತಿಯ ಚಟುವಟಿಕೆಯಲ್ಲಿ ತೊಡಗಬೇಡಿ
* ಪ್ರವಾಸಿ ಸ್ಥಳಗಳಲ್ಲಿ ಮದ್ಯಪಾನ ಮಾಡಬೇಡಿ
* ಇತರರಿಗೆ ಅನಾನುಕೂಲತೆ ಮಾಡುವ ರೀತಿಯಲ್ಲಿ ನಿಮ್ಮ ವಾಹನಗಳನ್ನು ನಿಲ್ಲಿಸಬೇಡಿ
* ಪ್ರವಾಸಿ ತಾಣಗಳಲ್ಲಿ ಜವಾಬ್ದಾರಿಯುತವಾಗಿ ವರ್ತಿಸಿ
* ಪ್ರವಾಸಿ ತಾಣಗಳಲ್ಲಿ ಮಹಿಳೆಯರು ಅಥವಾ ಹೆಣ್ಣು ಮಕ್ಕಳನ್ನು ಚುಡಾಯಿಸಬೇಡಿ
* ಪ್ಲಾಸ್ಟಿಕ್ ಬಾಟಲ್ ಅಥವಾಇತರೆ ಅನುಪಯುಕ್ತ ವಸ್ತುಗಳನ್ನು ಎಲ್ಲೆಂದರಲ್ಲಿ ಬಿಸಾಡಬೇಡಿ
* ಪ್ರಕೃತಿ, ಅದರ ಉತ್ತಮ ನಿರ್ವಹಣೆ ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿ ಎಂಬುದು ತಿಳಿಯಿರಿ
* ಶಿಸ್ತು,ಕಾನೂನು ಹಾಗೂ ನೀತಿನಿಯಮಗಳನ್ನು ಸದಾ ಅನುಸರಿಸಿ ಹಾಗೂ ಗೌರವಿಸಿ
* ಅರಣ್ಯ ಇಲಾಖೆ, ಜಿಲ್ಲಾಡಳಿತದ ಸೂಚನೆಗಳನ್ನು ತಪ್ಪದೆ ಪಾಲಿಸಿ
* ಅಪಾಯಕಾರಿ ಸ್ಥಳಗಳಲ್ಲಿಸೆಲ್ಫಿ ತೆಗೆದುಕೊಳ್ಳಲು ಪ್ರಯತ್ನಿಸಬೇಡಿ
* ದಯವಿಟ್ಟು ಪ್ರವಾಸಿ ಸ್ಥಳಗಳಲ್ಲಿ ಪ್ಲಾಸ್ಟಿಕ್ ವಸ್ತುಗಳನ್ನು ಬಳಸಬೇಡಿ/ ಎಸೆಯಬೇಡಿ
* ನಿಮ್ಮ ಸುರಕ್ಷತೆ ಮತ್ತು ನಿಮ್ಮ ಪ್ರೀತಿಪಾತ್ರರ ಸುರಕ್ಷತೆಯ ಬಗ್ಗೆ ಸದಾ ಜಾಗರೂಕರಾಗಿರಿ ಅಥವಾ ಇತರೆ ಅನುಪಯುಕ್ತ ವಸ್ತುಗಳನ್ನು ಎಲ್ಲೆಂದರಲ್ಲಿ ಬಿಸಾಡಬೇಡಿ

ಮುಂಗಾರು ಮಳೆ ಅವಧಿಯಲ್ಲಿ ಚಿಕ್ಕಮಗಳೂರು ಪ್ರವಾಸಕ್ಕೆ ಹೆಚ್ಚಿನ ಪ್ರವಾಸಿಗರು ಆಗಮಿಸುತ್ತಿದ್ದಾರೆ. ಆದರೆ ಕೆಲವು ಪ್ರವಾಸಿಗರ ಹುಚ್ಚಾಟದಿಂದಾಗಿ ದೇವರಮನೆ ಮೋಜು, ಮಸ್ತಿಯ ಅಡ್ಡವಾಗಿತ್ತು. ಇದರಿಂದಾಗಿ ಶ್ರೀ ಕ್ಷೇತ್ರ ಕಾಲಭೈರವೇಶ್ವರನ ಸನ್ನಿಧಿಗೆ ಆಗಮಿಸುವ ಭಕ್ತರು ಮುಜುಗರ ಅನುಭವಿಸಿದ್ದರು. ದೇವರಮನೆಯಲ್ಲಿ ಇತಿಹಾಸ ಪ್ರಸಿದ್ಧ ಕಾಲಭೈರವೇಶ್ವರನ ದೇವಾಲಯವಿದೆ. ಈ ಕ್ಷೇತ್ರಕ್ಕೆ ಭಕ್ತರು ಆಗಮಿಸುತ್ತಾರೆ. ಆದರೆ ಇಲ್ಲಿಗೆ ಸಂಪರ್ಕಿಸುವ ರಸ್ತೆಯಲ್ಲಿ ಕೆಲವು ಪ್ರವಾಸಿಗತು ಮದ್ಯ ಕುಡಿದು, ಧಮ್ ಹೊಡೆದುಕೊಂಡು, ರಸ್ತೆ ಮಧ್ಯೆ ಅಡ್ಡಾದಿಡ್ಡಿ ವಾಹನಗಳನ್ನು ನಿಲ್ಲಿಸಿಕೊಂಡು, ಜೋರಾಗಿ ಹಾಡು ಹಾಕಿಕೊಂಡು ಡ್ಯಾನ್ಸ್ ಮಾಡುತ್ತಿದ್ದರು. ಇದರಿಂದಾಗಿ ವಾಹನಗಳ ಸಂಚಾರಕ್ಕೆ ತೊಂದರೆ ಉಂಟಾಗಿತ್ತು. ಕೆಲವು ಪ್ರವಾಸಿಗರು ಜೋರಾಗಿ ಕಿರುಚಾಡಿ ಗದ್ದಲವನ್ನು ಎಬ್ಬಿಸುತ್ತಿದ್ದರು. ಸ್ಥಳೀಯರ ಮಾತನ್ನು ಸಹ ಯಾರೂ ಕೇಳುತ್ತಿರಲಿಲ್ಲ. ಆದ್ದರಿಂದ ಪೊಲೀಸರು ಸೂಕ್ತ ಕ್ರಮವನ್ನು ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದರು. ಬಳಿಕ ಬಣಕಲ್ ಠಾಣೆ ಪೊಲೀಸರು ದೇವರಮನೆ ಸಂಪರ್ಕಿಸುವ ರಸ್ತೆಯಲ್ಲಿ ಪ್ರವಾಸಿ ವಾಹನಗಳಲ್ಲಿ ಪಾರ್ಟಿ ಮಾಡುವವರ ಮೇಲೆ ದಾಳಿ ಮಾಡಿ ಪ್ರಕರಣ ದಾಖಲು ಮಾಡಿದ್ದರು.

# ಮತ್ತೆ ಕೇಳಿ ಬರುತ್ತಿದೆ ಕಲಬುರಗಿ ರೈಲ್ವೆ ವಿಭಾಗೀಯ ಕಛೇರಿ ಕೂಗು

**ಕಲಬುರಗಿ:** ಕಲಬುರಗಿ ರೈಲ್ವೆ ವಿಭಾಗದ ಕೂಗು ಮತ್ತೆ ಎದ್ದಿದೆ. ಬಹಳ ವರ್ಷಗಳಿಂದ ಕಲಬುರಗಿ ರೈಲ್ವೆ ವಿಭಾಗ ಕಛೇರಿ ಸ್ಥಾಪನೆಗಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುತ್ತಿದೆ.ಕೆಲವು ದಿನಗಳ ಹಿಂದೆ ಕಲಬುರಗಿ ಸಂಸದ, ಕಾಂಗ್ರೆಸ್ ನಾಯಕ ರಾಧಾಕೃಷ್ಣ ದೊಡ್ಡಮನಿ ನವ ದೆಹಲಿಯಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಭೇಟಿಯಾಗಿ ಈ ಕುರಿತು ಮನವಿಯನ್ನು ಸಲ್ಲಿಕೆ ಮಾಡಿದ್ದಾರೆ.

2014-15ನೇ ಸಾಲಿನಲ್ಲಿ ಕಲಬುರಗಿ ರೈಲ್ವೆ ವಿಭಾಗ ಮಂಜೂರಾಗಿತ್ತು. 5 ಕೋಟಿ ರೂ. ಅನುದಾನವನ್ನು ಮೀಸಲಿಡಲಾಗಿತ್ತು. ಆದರೆ ಇದುವರೆಗೂ ಈ ಕುರಿತು ಯಾವುದೇ ಕ್ರಮ ಕೈಗೊಂಡಿಲ್ಲ. ಈ ಕುರಿತು ಗಮನ ಹರಿಸಬೇಕು, ಕಲಬುರಗಿ ಲೋಕಸಭಾ ಕ್ಷೇತ್ರದ ರೈಲು ಯೋಜನೆಗಳಿಗೂ ಅನುದಾನ ನೀಡಬೇಕು ಎಂದು ಮನವಿ ಸಲ್ಲಿಸಿದರು.ರಾಜ್ಯ ಸರ್ಕಾರ ಜಮೀನು ನೀಡಿದೆ: ಕಲಬುರಗಿ ರೈಲ್ವೆ ವಿಭಾಗದ ಕಛೇರಿಗಾಗಿ ಕರ್ನಾಟಕ ಸರ್ಕಾರ ಉಚಿತವಗಿ ಭೂಮಿ ನೀಡಿದೆ. ಆದ್ದರಿಂದ ವಿಭಾಗ ಕಛೇರಿ ಸ್ಥಾಪನೆಗೆ ಕೂಡಲೇ ರೈಲು ಪ್ರಾಧಿಕಾರ ಅಥವ ಸಂಬಂಧಿಸಿದ ಪ್ರಾಧಿಕಾರ ಒಪ್ಪಿಗೆ ನೀಡಿ, ಕಾಮಗಾರಿ ಪೂರ್ಣಗೊಳಿಸಬೇಕು ಎಂದು ರೈಲ್ವೆ ಸಚಿವರಿಗೆ ಸಲ್ಲಿಕೆ ಮಾಡಿರುವ ಮನವಿಯಲ್ಲಿ ತಿಳಿಸಲಾಗಿದೆ.

ಈ ವರ್ಷದ ಜನವರಿಯಲ್ಲಿ ಕಲಬುರಗಿ ರೈಲ್ವೆ ವಿಭಾಗದ ಕಛೇರಿ ಆರಂಭಿಸಬೇಕು ಎಂದು ಆಗ್ರಹಿಸಿ ಕಲಬುರಗಿಯಲ್ಲಿ ಸಾಂಕೇತಿಕ ಧರಣಿಯನ್ನು ನಡೆಸಲಾಗಿತ್ತು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಲ್ಯಾಣ ಕರ್ನಾಟಕ ಭಾಗದ ರೈಲು ಯೋಜನೆಗಳನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿವೆ ಎಂದು ಹೋರಾಟಗಾರರು ಆಕ್ರೋಶ ವ್ಯಕ್ತಪಡಿಸಿದರು. ಅಟಲ್ ಬಿಹಾರಿ ವಾಜಪೇಯಿ ಸರ್ಕಾರ ಇದ್ದಾಗ ಕಲಬುರಗಿ ರೈಲ್ವೆ ವಿಭಾಗದ ಸ್ಥಾಪನೆ ತೀರ್ಮಾನವನ್ನು ಕೊನೆ ಕ್ಷಣದಲ್ಲಿ ಕೈ ಬಿಡಲಾಗಿತ್ತು. ಬಳಿಕ 2014ರಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ರೈಲ್ವೆ ಸಚಿವರಾಗಿದ್ದಾಗ ವಿಭಾಗ ಮಂಜೂರು ಮಾಡಿದರು. ರೈಲ್ವೆ ಮಂಡಳಿ ಅನುಮೋದನೆ ದೊರೆಯಿತು. ಆದರೆ ಅದು ಕಾರ್ಯರೂಪಕ್ಕೆ ಬಂದಿಲ್ಲ.

# ಅವಳಿ ನಗರದಲ್ಲಿ ಬಾಲ ಬಿಚ್ಚಿದರೆ ಜೋಕೆ : ನೂತನ ಕಮಿಷನರ್ ಎಚ್ಚರಿಕೆ..?



**ಹುಬ್ಬಳ್ಳಿ,**

ಹುಬ್ಬಳ್ಳಿ ಧಾರವಾಡ ಅವಳಿನಗರ, ಹೊರ ಭಾಗದ ಮಾದಕ ವಸ್ತುಗಳ ಸೇವನೆ, ಮಾರಾಟ ದಂಧೆ ಮೀತಿ ಮೀರಿದ್ದು ಗಾಂಜಾ, ಡ್ರಗ್ಸ್ ಮಾರಾಟ ಮಾಡುವವರು ಹಾಗೂ ಸೇವನೆ ಮಾಡುವವರ ಮಟ್ಟ ಹಾಕಲಾಗುವುದು ಎಂದು ಹುಬ್ಬಳ್ಳಿ-ಧಾರವಾಡ ನೂತನ ಪೊಲೀಸ್ ಆಯುಕ್ತ ಶಶಿಕುಮಾರ್ ಹೇಳಿದರು. ನಗರದಲ್ಲಿಂದು ಸುದ್ದಿಗಾರರ ಜೊತೆಗೆ ಅವರು ಮಾತನಾಡಿ, ಇದರಿಂದಾಗಿ ಯುವ ಸಮೂಹ ಹಾಳಾಗುತ್ತಿದೆ. ಮಾದಕ ವಸ್ತುಗಳ ಮಾರಾಟ ಹಾಗೂ ಸೇವನೆ ಮಾಡುವವರ ವಿರುದ್ಧ ಕಾರ್ಯಾಚರಣೆ ಆರಂಭಿಸಲಾಗುತ್ತದೆ. ಈಗ 180ಕ್ಕೂ ಹೆಚ್ಚು ಆರೋಪಗಳಿಗೆ ಪೇರಡ್ ಮೂಲಕ ವಾರ್ನ್ ಮಾಡಲಾಗಿದೆ. ಎನ್ ಡಿಪಿಎಸ್ ಕಾಯ್ದೆ ಅಡಿ ಆರೋಪಿಗಳಾಗಿದ್ದಾರೆ.

ಕೇವಲ ಸುಮ್ಮನೆ ಅವರನ್ನು ಕರೆಸಿ ಕಳಸಲ್ಲಯಾರಾರು ರೌಡಿಶೀಟರ್ ಸೇರಿದಂತೆ ಇತರ ಕೃತ್ಯಗಳಲ್ಲಿ ಭಾಗಿಯಾದವರ ಮೇಲೆ ಓಪನ್ ಮಾಡಲಾಗುತ್ತದೆ. ಇಂತಹ ಎನ್ ಡಿಪಿಎಸ್ ನಲ್ಲಿ ಭಾಗಿಯಾದವರು. ಅವರಿಗೆ ಬೆಂಬಲಕ್ಕೆ ನಿಂತವರು, ಸಹಾಯ ಮಾಡುವವರು,ವಾಹನ ಕೊಡುವವರು ಯಾರು? ಎಂದು ಪ್ರಶ್ನಿಸಿದರು.

**ಪೊಲೀಸ್ ವಿಶೇಷ ತಂಡ ರಚನೆ :**

ಡ್ರಗ್ ಮಾರಾಟ ಹೋಲ್ ಸೇಲ್ ಮಾರಾಟ, ಸೇವನೆ ಕುರಿತು ಮಾಹಿತಿ ಕಲೆ ಹಾಕಲಾಗಿದೆ. ನಮ್ಮ ಸಬ್ ಇನ್ಸೆಕ್ಟರ್ ,ಎಸಿಪಿ, ಡಿಸಿಪಿಗಳು, ಪ್ರತಿ ಠಾಣೆಯಿಂದ 10 ಸಿಬ್ಬಂದಿ ತಂಡ ರಚನೆ ಮಾಡಲಾಗಿದೆ. ಮುತುವರ್ಜಿಯಿಂದ ಕಾರ್ಯಾಚರಣೆ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಪ್ರತಿ ಪೊಲೀಸ್ ಠಾಣೆಯಲ್ಲಿ ಶೂನ್ಯ ಅಪರಾಧ ವ್ಯವಸ್ಥೆ ಮಾಡಲು ಪ್ರಯತ್ನ ಮಾಡಲಾಗುತ್ತದೆ. ಇನ್ನು ಗಾಂಜಾ, ಡ್ರಗ್ಸ್ ಮೂಲ ಯಾವುದು? ಈ ಕುರಿತು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆಯಾವ ಯಾವಾ ಏರಿಯಾಗಳಲ್ಲಿ ಮಾದಕ ವಸ್ತುಗಳ ಮಾರಾಟ ಮಾಡಲಾಗುತ್ತದೆ ಎಂಬ ಮಾಹಿತಿ ಕಲೆ ಹಾಕಲಾಗುತ್ತಿದೆ. ಶಾಲಾ-ಕಾಲೇಜು ಸುತ್ತಮುತ್ತ ನಿಗಾ ಇಡಲು ಸೂಚನೆ ಇನ್ನು ಶಾಲಾ ಕಾಲೇಜುಗಳ ಸುತ್ತಲಿನ ಪ್ರದೇಶದಲ್ಲಿ ಸಿಸಿ ಟಿವಿ ಅಳವಡಿಕೆ ಮಾಡುವಂತೆ ಅವರು ತಾಕೀತು ಮಾಡಿದರು. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು. ಒಂದು ಸಿಸಿ ಟಿವಿ ಇದೆ ಅಂದರೆ ಅಲ್ಲಿ ಎಷ್ಟೋ ಅಪರಾಧ ಕೃತ್ಯ ತಡೆಯಲು ಸಾಧ್ಯವಾಗುತ್ತದೆ. ಯಾವುದೇ ಪ್ರಭಾವಕ್ಕೆ ಒಳಗಾಗುವ ಪ್ರಶ್ನೆಯೇ ಇಲ್ಲ. ಗಾಂಜಾ ಡ್ರಗ್ಸ್ ಮಾರಾಟ, ಸೇವನೆ ವಿಚಾರದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಮುಂದಾಗಿದ್ದೇವೆ ಎಂದು ಹೇಳಿದರು.

# ಸ್ವಾತಂತ್ರ್ಯೋತ್ಸವ ಆಚರಣೆಗೆ ವೇಳೆ ಮೂಲಸೌಕರ್ಯಗಳಿಗೆ ಆದ್ಯತೆ ನೀಡಿ: ಬಿಬಿಎಂಪಿ

ವರ್ಷದಂತೆ ಈ ವರ್ಷವು ಸಹ ಬಹುವಿಜೃಂಭಣೆಯಿಂದ ಸ್ವಾತಂತ್ರ್ಯೋತ್ಸವ ದಿನಾಚರಣೆಯು ಆಗಸ್ಟ್ 15ರಂದು ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನ ಸೇರಿದಂತೆ ರಾಜ್ಯಾದ್ಯಂತ ನಡೆಯಲಿದೆ. ಈ ಸಂಬಂಧ ಬೆಂಗಳೂರಿನಲ್ಲಿ ಅಗತ್ಯ ಸಿದ್ಧತೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ತೊಡಗಿದೆ.

ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆಗೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆ ಆಚರಿಸುವ ಸಂಬಂಧ ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸುವ ಸಂಬಂಧ ಆಯಾ ಇಲಾಖೆಗಳಿಗೆ ನೀಡಿರುವ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಬೇಕೆಂದು ತಿಳಿಸಿದರು. ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಆಸನಗಳ ವ್ಯವಸ್ಥೆ, ಯಾವ ದ್ವಾರಗಳಲ್ಲಿ ಯಾರಿಗೆ ಪ್ರವೇಶ ನೀಡಬೇಕು, ಪಾರ್ಕಿಂಗ್ ವ್ಯವಸ್ಥೆ, ಮಾರ್ಗ ಬದಲಾವಣೆ ಸೇರಿದಂತೆ ಇನ್ನಿತರೆ ವ್ಯವಸ್ಥೆಗಳಲ್ಲಿ ಯಾವುದೇ ರೀತಿಯ ಗೊಂದಲಗಳಿಲ್ಲದಂತೆ ನೋಡಿಕೊಳ್ಳಬೇಕೆಂದು ಸೂಚಿಸಲಾಯಿತು

ಬೆಂಗಳೂರು ಜಲಮಂಡಳಿ ವತಿಯಿಂದ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಮೈದಾನದಲ್ಲಿ ಶೌಚಾಲಯಗಳ ವ್ಯವಸ್ಥೆ, ಕಾರ್ಯಕ್ರಮದ ದಿನ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸುವ ಹಾಗೂ ಭದ್ರತೆಯ ಹಿತದೃಷ್ಟಿಯಿಂದ ಸಿಸಿ ಕ್ಯಾಮೆರಾಗಳನ್ನು ಅಳವಡಿಸಬೇಕೆಂದು ತಿಳಿಸಿದರು.



# ಸರ್ಕಾರಿ ನೌಕರರು ಈ ಹಿಂದೆ ಮುಷ್ಕರ ನಡೆಸಿದಾಗ ಏನಾಗಿತ್ತು?

1ನೇ ಪುಟದಿಂದ

ಅಂದು ಮುಷ್ಕರ ನಡೆಸಿದಾಗ ಏನಾಗಿತ್ತು?: ಆಗ ಕರ್ನಾಟಕದ ಸರ್ಕಾರಿ ನೌಕರರು 7ನೇ ವೇತನ ಆಯೋಗದ ಶಿಫಾರಸು ಜಾರಿ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದ್ದರು. ಆಗ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಸ್ತಿತ್ವದಲ್ಲಿತ್ತು. ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದರು, ಹಣಕಾಸು ಖಾತೆಯೂ ಅವರ ಬಳಿ ಇತ್ತು.

ಸರ್ಕಾರಿ ನೌಕರರು ಮುಷ್ಕರ ಆರಂಭಿಸುತ್ತಿದ್ದಂತೆಯೇ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಣಕಾಸು ಇಲಾಖೆ ಅಧಿಕಾರಿಗಳ ಸಭೆಯನ್ನು ನಡೆಸಿದ್ದರು. ಸರ್ಕಾರಿ ನೌಕರರ ವೇತನ ಎಷ್ಟು ಹೆಚ್ಚಳ ಮಾಡಬಹುದು? ಎಂದು ವಿವರ ಪಡೆದಿದ್ದರು. ಬಳಿಕ ಹಣಕಾಸು ಇಲಾಖೆ ಅಧಿಕಾರಿಗಳು ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ ಜೊತೆ ಸಭೆಯನ್ನು ನಡೆಸಿದ್ದರು. ಸರಣಿ ಸಭೆಗಳ ಬಳಿಕ ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-2) ಸರ್ಕಾರಿ ನೌಕರರ ವೇತನ ಶೇ 17ರಷ್ಟು ಹೆಚ್ಚಳದ ಬಗ್ಗೆ ಅಧಿಕೃತ ಆದೇಶವನ್ನು ಹೊರಡಿಸಿದ್ದರು. 2023ರ ಏಪ್ರಿಲ್ 1ರಿಂದಲೇ ಈ ಆದೇಶ ಜಾರಿಗೆ ಬರಲಿದೆ ಎಂದು ಸ್ಪಷ್ಟಪಡಿಸಿದ್ದರು.

ಅಲ್ಲದೇ ಆದೇಶದಲ್ಲಿ ದಿನಾಂಕ 19/11/2022ರ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು 7ನೇ ರಾಜ್ಯ ವೇತನ ಆಯೋಗವನ್ನು ರಚಿಸಲಾಗಿದೆ. ಪ್ರಸ್ತುತ ಸರ್ಕಾರಿ ನೌಕರರ ಬೇಡಿಕೆ ಹಿನ್ನೆಲೆಯಲ್ಲಿ, ಸರ್ಕಾರದ ನೀತಿ ನಿರ್ಣಯದಂತೆ 7ನೇ ರಾಜ್ಯ ವೇತನ ಆಯೋಗದ ಅಂತಿಮ ವರದಿಯನ್ನು ಕಾಯ್ದಿರಿಸಿ, ರಾಜ್ಯ ಸರ್ಕಾರಿ ನೌಕರರಿಗೆ, ಸ್ಥಳೀಯ ಸಂಸ್ಥೆಗಳ ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಹಾಗೂ ವಿಶ್ವವಿದ್ಯಾನಿಲಯಗಳ ಬೋಧಕೇತರ ಸಿಬ್ಬಂದಿಗಳಿಗೆ ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ ಎಂದು ತಿಳಿಸಲಾಗಿತ್ತು. 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ಪಡೆಯುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ 1ನೇ ಏಪ್ರಿಲ್ 2023 ರಿಂದ ಜಾರಿಗೆ ಬರುವಂತೆ ಮೂಲ ವೇತನದ ಶೇಕಡ 17 ರಷ್ಟು ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ ಎಂದು ಆರ್ಥಿಕ ಇಲಾಖೆ ಹೊರಡಿಸಿದ ಆದೇಶದಲ್ಲಿ ತಿಳಿಸಲಾಗಿತ್ತು. ಈ ಆದೇಶ ಪ್ರಕಟವಾದ ಬಳಿಕ ಸರ್ಕಾರಿ ನೌಕರರು ರಾಜ್ಯದ ಜನರಿಗೆ ಉಂಟಾದ ತೊಂದರೆಗೆ ಕ್ಷಮೆಯನ್ನು ಕೇಳಿ ಮುಷ್ಕರವನ್ನು ವಾಪಸ್ ಪಡೆದಿದ್ದರು.

# ಅಂಗನವಾಡಿ ಕಾರ್ಯಕರ್ತರಿಗೆ ಶೀಘ್ರದಲ್ಲೇ ಗುಡ್ ನ್ಯೂಸ್

ಆಹಾರ ಸಮಗ್ರಗಳ ಪ್ಯಾಕ್ ಮಾಡುವ ತೂಕವನ್ನು ಕೂಡ ಗಮನಿಸಿದರು. ಅಂಗನವಾಡಿ ಕೇಂದ್ರಗಳಿಗೆ ಪೂರೈಕೆಯಾಗುವ ಎಲ್ಲ ಆಹಾರ ಸಾಮಗ್ರಿಗಳಲ್ಲಿ, ಅದರಲ್ಲೂ ಉತ್ಪಾದನೆಯಲ್ಲೂ ಗುಣಮಟ್ಟವನ್ನು ಕಾಯ್ದುಕೊಳ್ಳಬೇಕು. ಆಹಾರ ಸಾಮಗ್ರಿಗಳು ಕಳಪೆ ಇದ್ದಲ್ಲಿ ಅಥವಾ ಯಾವುದೇ ಲೋಪದೋಷ ಇದ್ದಲ್ಲಿ ಕೂಡಲೇ ಸಂಬಂಧಪಟ್ಟವರ ಗಮನಕ್ಕೆ ತರಬೇಕು. ಇಲ್ಲವಾದರೆ ನೇರವಾಗಿ ತಮಗೆ ಪತ್ರ ಬರೆಯಬೇಕು ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಸೂಚಿಸಿದರು.

**ಸಹಾಯವಾಣಿಯಲ್ಲಿ ಕರೆ ಸ್ವೀಕರಿಸಿದ ಸಚಿವರು**

ಒಳ್ಳೆ ಬುದ್ದಿ ಕಲಿತು, ಚೆನ್ನಾಗಿ ಓದಿ ಅಪ್ಪ ಅಮ್ಮನಿಗೆ ಒಳ್ಳೆ ಹೆಸರು ತನ್ನಿ. ಇನ್ಮೇಲೆ ಯಾವುದೇ ಕೆಟ್ಟ ಕೆಲಸ ಮಾಡದೇ, ಒಳ್ಳೆ ಪ್ರಜೆಯಾಗಿ ಬಾಳಿ. ಇದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಸರ್ಕಾರಿ ವೀಕ್ಷಣಾಲಯಕ್ಕೆ ಭೇಟಿ ನೀಡಿದ ವೇಳೆ ಮಕ್ಕಳಿಗೆ ಹೇಳಿದ ಬುದ್ದಿ ಮಾತು. ಮಡಿವಾಳದ ಸ್ತ್ರೀ ಭವನದ ಆವರಣದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸರ್ಕಾರಿ ವೀಕ್ಷಣಾಲಯಕ್ಕೆ ದಿಢೀರ್ ಭೇಟಿ ನೀಡಿದ ಸಚಿವರು, ಕಾನೂನು ಸಂಘರ್ಷಕ್ಕೆ ಒಳಗಾದ ಮಕ್ಕಳನ್ನು ಭೇಟಿಯಾದರು.

ಸನ್ನಡತೆ ಬೆಳೆಸಿಕೊಂಡು, ಉತ್ತಮ ಪ್ರಜೆಯಾಗಿ ಬಾಳಿ ಎಂದು ಮಾರ್ಗದರ್ಶನ ನೀಡಿದರು. ಇದಕ್ಕೂ ಮುನ್ನ ಸ್ತ್ರೀ ಶಕ್ತಿ ಭವನದ ಆವರಣದಲ್ಲಿರುವ ಮಹಿಳಾ ಮತ್ತು ಮಕ್ಕಳ ಸಹಾಯವಾಣಿ ಕೇಂದ್ರಕ್ಕೆ ಭೇಟಿ ನೀಡಿದರು. ಈ ವೇಳೆ ಕೇಂದ್ರದ ಸಿಬ್ಬಂದಿ ಜೊತೆಗೆ ಸಹಾಯವಾಣಿಯ ಕಾರ್ಯ ನಿರ್ವಹಣೆ ಕುರಿತಂತೆ ಮಾಹಿತಿ ಸಂಗ್ರಹಿಸಿದರು. ಜೊತೆಗೆ ಕರೆಯೊಂದನ್ನು ಸ್ವೀಕರಿಸಿ, ಸಮಸ್ಯೆಯನ್ನು ಆಲಿಸಿದರು. ರಾತ್ರಿ ವೇಳೆ ಕೇಂದ್ರಕ್ಕೆ ಮತ್ತೊಮ್ಮೆ ಭೇಟಿ ನೀಡುವುದಾಗಿ ಹೇಳಿದರು.

1ನೇ ಪುಟದಿಂದ



# ಮಳೆ.. ಮಳೆ.. ಮಳೆ.. ಯಾವ ಯಾವ ಜಿಲ್ಲೆಗಳಲ್ಲಿ ಭಾರಿ ಮಳೆ..?

ಮುಂಗಾರು ಮಳೆ ಮತ್ತಷ್ಟು ಜೋರಾಗುತ್ತಿದೆ, ಭರ್ಜರಿ ಮಳೆ ಬೀಳುತ್ತಿರುವ ಕಾರಣಕ್ಕೆ ಈಗಾಗಲೇ ಕರ್ನಾಟಕ ಪೂರ್ತಿ ತೊಯ್ದು ಹೋಗಿದೆ. ಹೀಗಿದ್ದರೂ ಮಳೆರಾಯ ಮಾತ್ರ ಸೈಲೆಂಟ್ ಆಗುತ್ತಿಲ್ಲ. ಈಗ ನೋಡಿದ್ರೆ ಮತ್ತೆ ಮುಂದಿನ 24 ಗಂಟೆ ಕಾಲ ಮತ್ತಷ್ಟು ಜೋರಾಗಿ ಮಳೆ ಬೀಳಲಿದೆ ಎಂದು ಎಚ್ಚರಿಕೆ ನೀಡಲಾಗಿದೆ. ಹಾಗಾದ್ರೆ ಹವಾಮಾನ ಇಲಾಖೆ ಹೇಳಿರುವ ಪ್ರಕಾರ ಯಾವೆಲ್ಲಾ ಜಿಲ್ಲೆ & ತಾಲೂಕುಗಳಿಗೆ ಮುಂದಿನ 24 ಗಂಟೆ ಭರ್ಜರಿ ಮಳೆ ಬರಲಿದೆ ಗೊತ್ತಾ?

ಕರ್ನಾಟಕದಲ್ಲಿ ಮುಂಗಾರು ಮಳೆ ಅಬ್ಬರ ಜೋರಾಗಿದೆ ಹೀಗಾಗಿ ಎಲ್ಲೆಲ್ಲೂ ಭಾರಿ ಮಳೆ ಬೀಳುತ್ತಿದೆ. ಕರಾವಳಿ & ಮಲೆನಾಡು ಕರ್ನಾಟಕದಲ್ಲಿ ಮಾತ್ರ ಅಲ್ಲ, ಉತ್ತರ ಕರ್ನಾಟಕ & ದಕ್ಷಿಣ ಕರ್ನಾಟಕದ ಭಾಗದಲ್ಲಿ ಕೂಡ ಮಳೆರಾಯ ಅಬ್ಬರಿಸಿದ್ದು ಎಲ್ಲೆಲ್ಲೂ ಬರೀ ನೀರೆ ಕಾಣ್ತಿದೆ ಪರಿಸ್ಥಿತಿ ಹೀಗಿದ್ದಾಗಲೇ ಮುಂದಿನ 24 ಗಂಟೆ ಕಾಲ ಮತ್ತಷ್ಟು ರಣಭೀಕರ ಮಳೆ ಬೀಳುವ ಮುನ್ನೆಚ್ಚರಿಕೆ ನೀಡಲಾಗಿದೆ. ಹೀಗೆ ಭಾರಿ ಮಳೆ ಬೀಳುವ ಜಿಲ್ಲೆಗಳು ಯಾವುವು ಗೊತ್ತಾ?

**ಬೆಂಗಳೂರಲ್ಲಿ ಸೂರ್ಯ ಕಾಣಲ್ಲ!**

ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಚಿಕ್ಕಮಗಳೂರು, ಬೆಳಗಾವಿ, ಕೊಡಗು, ಶಿವಮೊಗ್ಗ ಜಿಲ್ಲೆಗಳಲ್ಲಿ ಮುಂದಿನ 24 ಗಂಟೆ ಭಾರಿ ಮಳೆ ಬೀಳಲಿದೆ ಎಂಬ ಮುನ್ಸೂಚನೆ ನೀಡಲಾಗಿದೆ. ಇದರ ಜತೆ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಹಾಸನ, ದಾವಣಗೆರೆ, ಮೈಸೂರು & ಮಂಡ್ಯ ಸೇರಿ ಚಿತ್ರದುರ್ಗ, ತುಮಕೂರು, ಕಲಬುರಗಿ, ಬೀದರ್, ಕೋಲಾರದಲ್ಲೂ ಮಳೆ ಅಬ್ಬರ ಗ್ಯಾರಂಟಿ ಆಗಿದೆ. ಅದರಲ್ಲೂ ಬೆಂಗಳೂರಲ್ಲಿ ಇನ್ನೂ 1 ವಾರಗಳ ಕಾಲ ಸೂರ್ಯ ಕಾಣುವುದೇ ಅನುಮಾನ ಎನ್ನಲಾಗುತ್ತಿದೆ. ಯಾಕಂದ್ರೆ ಮುಂದಿನ 1 ವಾರ ಕಾಲ, ಇದೇ ರೀತಿ ಮಳೆ ಅಬ್ಬರವು ಇರಲಿದೆ ಎನ್ನಲಾಗಿದೆ.

**ಕರ್ನಾಟಕ ಪೂರ್ತಿ ಭಾರಿ ಮಳೆ**

ರಾಜಧಾನಿ ಬೆಂಗಳೂರು ಸೇರಿ ವಿಜಯಪುರ & ಕಲಬುರಗಿ, ರಾಯಚೂರು, ಯಾದಗಿರಿ, ಬೀದರ್, ಬಾಗಲಕೋಟೆ, ಬೆಳಗಾವಿ & ಬಳ್ಳಾರಿ, ಕೊಪ್ಪಳ, ಧಾರವಾಡ, ಗದಗ ಜಿಲ್ಲೆಗಳಲ್ಲೂ ಮುಂಗಾರು ಮಳೆ ಅಬ್ಬರಿಸಲಿದೆ. ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು, ಚಾಮರಾಜನಗರ, ಮಂಡ್ಯ, ಮಂಗಳೂರು, ಉತ್ತರ ಕನ್ನಡ, ತುಮಕೂರು, ಹಾಸನ ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಭರ್ಜರಿ ಮಳೆ ಆಗಲಿದೆಯಂತೆ. ಹೀಗಾಗಿ ಎಲ್ಲೆಲ್ಲೂ ಅಲರ್ಟ್ ಘೋಷಣೆ ಮಾಡಲಾಗಿದೆ. ಅಲ್ಲದೆ ಮಳೆಯಿಂದ ರಕ್ಷಣೆ ಪಡೆಯಲು ಅತ್ಯಗತ್ಯ ಮುಚ್ಚರಿಕೆ ಸಲಹೆಗಳನ್ನು ಪಾಲಿಸುವಂತೆ, ಸೂಚನೆ ನೀಡಲಾಗಿದೆ.

# ಮಟ.. ಮಟ ಮಧ್ಯಾಹ್ನವೇ ಬೆಳಗಾವಿಯಲ್ಲಿ ಮಳೆರಾಯನ ಆರ್ಭಟಕ್ಕೆ ರಸ್ತೆಗಳು ಜಲಾವೃತ, ವಾಹನ ಸವಾರ ಪರದಾಟ

**ಬೆಳಗಾವಿ,**

ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆರಾಯ ಅಬ್ಬರಿಸಿ ಬೊಬ್ಬರೆಯುತ್ತಿದ್ದಾನೆ. ಹಾಗೆಯೇ ಬೆಳಗಾವಿ ಜಿಲ್ಲೆಯಲ್ಲೂ ಕೂಡ ಇಂದು (ಜುಲೈ 14) ಮಧ್ಯಾಹ್ನ ಎರಡು ಗಂಟೆಗಳ ಕಾಲ ಸುರಿದ ಮಳೆ ಅವಾಂತರವನ್ನೇ ಸೃಷ್ಟಿಸಿದೆ.

ಇಂದು ಮಧ್ಯಾಹದ ವೇಳೆಗೆ ಎರಡು ಗಂಟೆಗಳ ಕಾಲ ಸುರಿದ ಧಾರಾಕಾರ ಮಳೆಯಿಂದಾಗಿ ಬೆಳಗಾವಿಯ ಹಲವೆಡೆ ರಸ್ತೆಗಳು ಕೆರೆಯಂತಾಗಿದ್ದು, ವಾಹನ ಸವಾರರು ಪರದಾಡಿದ ಘಟನೆ ನಡೆದಿದೆ. ಮತ್ತೊಂದೆಡೆ ನಗರದ ಗಾಂಧಿನಗರ ಬಳಿ ರಾಷ್ಟ್ರೀಯ ಹೆದ್ದಾರಿಯ ಬ್ರೀಡ್ಜ್ ಕೆಳಗೆ ಸಂಪೂರ್ಣ ಜಲಾವೃತವಾಗಿದ್ದು, ಪರಿಣಾ ಸಂಚಾರ ಅಸ್ತವ್ಯಸ್ತವಾಗಿದೆ.

ಸೇತುವೆಗಳು ಜಲಾವೃತ: ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆರಾಯ ಅಬ್ಬರಿಸಿ ಬೊಬ್ಬೆರೆದು ಅವಾಂತರಗಳನ್ನೇ ಸೃಷ್ಟಿಸಿದ್ದಾನೆ. ಹಾಗೆಯೇ ಬೆಳಗಾವಿ ಜಿಲ್ಲೆಯಲ್ಲೂ ಕೂಡ ಭಾರೀ ಮಳೆಯಿಂದ ಹಳ-ಕೊಳ್ಳ-ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಇದರಿಂದ ಜನರು ಒಂದು ಕಡೆಯಿಂದ ಮತ್ತೊಂದು ಕಡೆಗೆ ಪ್ರಯಾಣ ಮಾಡಲು ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಜನರ ಸಂಚಾರ ಅಸ್ತವ್ಯಸ್ತ: ಮಹಾರಾಷ್ಟ್ರ ಮತ್ತು ಪಶ್ಚಿಮ ಘಟ್ಟ ಪ್ರದೇಶದಲ್ಲಿ ಮಳೆರಾಯನ ಆರ್ಭಟ ಮುಂದುವರೆದಿದೆ. ಅಲ್ಲದೆ, ಚಿಕ್ಕೋಡಿ ಉಪವಿಭಾಗ ವ್ಯಾಪ್ತಿಯ ಮೂರು ಸಂಪರ್ಕ ಸೇತುವೆಗಳು ಮುಳುಗಡೆಯಾಗಿದೆ. ಕೃಷ್ಣಾ, ವೇದಗಂಗಾ ಹಾಗೂ ದೂದಗಂಗಾ ನದಿಗಳು ಮೈದುಂಬಿ ಹರಿಯುತ್ತಿರುವ ಪರಿಣಾಮ ನಿಪ್ಪಾಣಿ ತಾಲೂಕಿನ ಕುನ್ನೂರ-ಬಾರವಾಡ ಸಂಪರ್ಕಿಸುವ ಸೇತುವೆ ಜಲಾವೃತವಾದ ಘಟನೆ ನಡೆದಿದ್ದು, ಜನರ ಸಂಚಾರ ಅಸ್ತವ್ಯಸ್ತವಾಗಿದೆ. ನೀರಿನ ಒಳಹರಿವು ಹೆಚ್ಚಳ: ಭಾರೀ ಮಳೆಯಿಂದ ದೂದಗಂಗಾ ನದಿಯಿಂದ ಕಾರದಗಾ-ಬೋಜ್, ಕುನ್ನೂರ-ಭೋಜವಾಡಿ ಸಂಪರ್ಕಿಸುವ ಸೇತುವೆ ಜಲಾವೃತವಾಗಿದೆ. ಇನ್ನು ಕೃಷ್ಣಾ ನದಿಗೆ ಸುಮಾರು 55 ಸಾವಿರ ಕ್ಯೂಸೆಕ್‌ಗೂ ಹೆಚ್ಚು ನೀರಿನ ಒಳಹರಿವು ಇದ್ದು, ಮುಂಜಾಗ್ರತಾ ಕ್ರಮವಾಗಿ ನದಿಗೆ ಇಳಿಯದಂತೆ ಬೆಳಗಾವಿ ಜಿಲ್ಲಾಡಳಿತದಿಂದ ನದಿ ಪಾತ್ರದ ಜನರಿಗೆ ಸೂಚನೆ ನೀಡಲಾಗಿದೆ.



# ಶಿವಮೊಗ್ಗ-ಶಿಕಾರಿಪುರ ನಡುವೆ ಸಂಚರಿಸುವ ಪ್ರಯಾಣಿಕರಿಗೆ "ಟೋಲ್" ಹೊಸ ತಲೆ ಬಿಸಿ!




**ಶಿವಮೊಗ್ಗ :**

ಹದಗೆಟ್ಟ ರಸ್ತೆಯನ್ನು ರಿಪೇರಿ ಮಾಡದೆ, ಹತ್ತು ವರ್ಷ ಹಿಂದೆ ನಿರ್ಮಾಣ ಮಾಡಿರುವ ಗುಂಡಿ ಬಿದ್ದಿರುವ, ಹೆದ್ದಾರಿ ಗುಣಮಟ್ಟವೇ ಇಲ್ಲದ ರಸ್ತೆಗೆ ಟೋಲ್ ಸಂಗ್ರಹಿಸಲಾಗುತ್ತಿದೆ ಎಂದು ಸಾರ್ವಜನಿಕರು ಗರಂ ಆಗಿದ್ದಾರೆ. ನ್ಯಾಮತಿಯಿಂದ ಶಿವಮೊಗ್ಗ ಹಾಗೂ ಶಿಕಾರಿಪುರದವರೆಗೆ ನಡುವೆ ಇರುವ ರಸ್ತೆಗೆ ಟೋಲ್ ಸಂಗ್ರಹಿಸಲಾಗುತ್ತಿದೆ ಎಂದು ಸಾರ್ವಜನಿಕರು ಗರಂ ಆಗಿದ್ದಾರೆ.

1 ನ್ಯಾಮತಿಯಿಂದ ಶಿವಮೊಗ್ಗ-ಶಿಕಾರಿಪುರ ನಡುವೆ ಸಂಚರಿಸುವ ಪ್ರಯಾಣಿಕರಿಗೆ ಬಿಸಿ

2 ಇಂಧನ ಬೆಲೆ ಏರಿಕೆಯ ಮಧ್ಯೆ ಟೋಲ್ ಪಾವತಿ ಹೊರೆ

3 ಟೋಲ್ ಗೇಟ್ ನಿರ್ಮಾಣ ಮಾಡಿರುವ ಕಡೆ ಮಾತ್ರ ರಸ್ತೆ ವಿಸ್ತರಿಸಲಾಗಿದೆ, ಉಳಿದಂತೆ ರಸ್ತೆ ಅಧ್ವಾನವಾಗಿಯೇ ಇದೆ.

ನ್ಯಾಮತಿ: ಜಿಲ್ಲೆಯ ಮಲೆನಾಡಿನ ಗಡಿ ತಾಲೂಕು ನ್ಯಾಮತಿಯಿಂದ ಶಿವಮೊಗ್ಗ-ಶಿಕಾರಿಪುರ ನಡುವೆ ಸಂಚರಿಸುವ ಪ್ರಯಾಣಿಕರಿಗೆ ಇದೇ ಮೊದಲ ಬಾರಿ ಟೋಲ್ ಬಿಸಿ ತಟ್ಟಿದ್ದು, ಹತ್ತು ವರ್ಷದ ಹಿಂದೆ ನಿರ್ಮಿಸಿ ಈಗ ಅಧ್ವಾನ ಆಗಿರುವ ರಸ್ತೆಗೆ ಟೋಲ್ ವಸೂಲಿಗೆ ನಿಂತಿರುವುದು ತಾಲೂಕಿನ ಜನರ ಆಕ್ರೋಶಕ್ಕೆ ಕಾರಣವಾಗಿದೆ.

ರಾಜ್ಯ ಹೆದ್ದಾರಿ 57ರ ಶಿವಮೊಗ್ಗ-ಶಿಕಾರಿಪುರ ನಡುವೆ ನ್ಯಾಮತಿ ತಾಲೂಕಿನ ಸವಳಂಗ ಗ್ರಾಮದ ಸಮೀಪ ಶಿವಮೊಗ್ಗ ತಾಲೂಕಿನ ಕಲ್ಲಾಪುರ ಬಳಿ ಮತ್ತು ಶಿಕಾರಿಪುರ ತಾಲೂಕು ಕಣಿವೆ ಮನೆ ಸಮೀಪ ನಿರ್ಮಿಸಿ ಕಳೆದ ಮೂರು ತಿಂಗಳಿಂದ ಟೋಲ್ ರಸ್ತೆ ದುರಸ್ತಿ ಮಾಡಿದ ಬೆಂಗಳೂರು ಮೂಲದ ಕಂಪನಿ ವಾಹನ ಸವಾರರಿಂದ ರಸ್ತೆ ಬಳಕೆ ಶುಲ್ಕ ಸಂಗ್ರಹಿಸುತ್ತಿದೆ. ಸ್ಥಳೀಯ ವಾಹನಗಳಿಗೇನೋ 220 ರೂ. ಪಡೆದು ಮಾಸಿಕ ಪಾಸ್ ನೀಡಲಾಗುತ್ತಿದೆಯಾದರೂ ಸ್ಥಳೀಯರ ಅಕ್ರೋಶ ತಣ್ಣಗಾಗಿಲ್ಲ.




# ಬಳ್ಳಾರಿಯಲ್ಲಿ ಅನಧಿಕೃತ ಕಟ್ಟಡ -ಕೈಗಾರಿಕೆಗಳಿಗಿಲ್ಲ ಲಗಾಮು; ಪಾಲಿಕೆಗೆ ತೆರಿಗೆ ವಂಚನೆ

**ಬಳ್ಳಾರಿ :**

ಜಿಲ್ಲಾಮಟ್ಟದ ಅಧಿಕಾರಿಗಳು, ಸಚಿವರಿರುವ ಬಳ್ಳಾರಿ ಮಹಾನಗರದಲ್ಲಿಯೇ ಅನಧಿಕೃತ ವಸತಿ, ವಾಣಿಜ್ಯ, ಕೈಗಾರಿಕೆಗಳು, ಬಡಾವಣೆಗಳ ನಿರ್ಮಾಣ ಎಗ್ಗಿಲ್ಲದೆ ಸಾಗಿದೆ. ಇದಕ್ಕೆ ಕಡಿವಾಣ ಹಾಕಬೇಕಿರುವ ಅಧಿಕಾರಿಗಳ ವರ್ಗವೇ ಮೌನಕ್ಕೆ ಜಾರಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಪಾಲಿಕೆಗೆ ತೆರಿಗೆ ವಂಚನೆಯಾಗುತ್ತಿರುವ ಅಂಶ ಬೆಳಕಿಗೆ ಬಂದಿದೆ. ಈ ಬಗ್ಗೆ ಸಂಬಂಧಪಟ್ಟವರು ಮೌನ ವಹಿಸಿದ್ದಾರೆ.

ಬಳ್ಳಾರಿ: ಮಹಾ ನಗರ ದಿನದಿಂದ ದಿನಕ್ಕೆ ವಿಸ್ತಾರಗೊಂಡಿದೆ. ಬೃಹತ್ ಆಗಿಯೂ ಬೆಳೆದಂತೆ ಬೃಹತ್ ಕಟ್ಟಡಗಳು, ವಾಣಿಜ್ಯ ಮಳಿಗೆಗಳು, ನೂತನ ಬಡಾವಣೆಗಳು, ಕೈಗಾರಿಕೋದ್ಯಮಗಳು ಸ್ಥಾಪನೆಯಾಗಿದ್ದು, ಇದರಲ್ಲಿಅಧಿಕೃತಕ್ಕಿಂತ ಅನಧಿಕೃತ ಸಂಖ್ಯೆಯೇ ಹೆಚ್ಚಾಗಿದೆ. ಹೀಗಾಗಿ ಪಾಲಿಕೆಗೆ ತೆರಿಗೆ ವಂಚನೆಯಾಗುತ್ತಿರುವ ಅಂಶ ಬೆಳಕಿಗೆ ಬಂದಿದೆ.

ಜಿಲ್ಲಾ ಕೇಂದ್ರವಾದ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ 39 ವಾರ್ಡ್‌ಗಳನ್ನು ಹೊಂದಿದೆ. ವರ್ಷದಿಂದ ವರ್ಷಕ್ಕೆ ಜನಸಂಖ್ಯೆ ಹೆಚ್ಚಳವಾದಂತೆ ನಗರದ ವಿಸ್ತಾರದ ವ್ಯಾಪ್ತಿಯೂ ವೇಗದಲ್ಲಿ ಬೆಳೆಯುತ್ತಿದೆ. ಜನಸಂಖ್ಯೆಗೆ ತಕ್ಕಂತೆ ವಸತಿ, ವಾಣಿಜ್ಯ, ಕೈಗಾರಿಕೆಗಳು, ಬಡಾವಣೆಗಳ ನಿರ್ಮಾಣವೂ ಏರುಗತಿಯಲ್ಲಿ ಸಾಗುತ್ತಿದೆ.

ಇದರ ನಡುವೆ ಅನಧಿಕೃತವಾಗಿ ಬೃಹತ್ ಕಟ್ಟಡಗಳು, ವ್ಯಾಪಾರಿ ಮಳಿಗೆಗಳು, ಕೈಗಾರಿಕೆ ನಿರ್ಮಾಣ ಮಾಡುವವರ ಸಂಖ್ಯೆ ದ್ವಿಗುಣವಾಗುತ್ತಿರುವುದು ಕಳವಳ ಮೂಡಿಸಿದೆ.

# ಮಧ್ಯಕರ್ನಾಟಕ ರೈತರಿಗೆ ಗುಡ್‌ನ್ಯೂಸ್: ಭದ್ರಾ ಜಲಾಶಯಕ್ಕೆ ಒಳಹರಿವು ಭಾರೀ ಏರಿಕೆ! ಡ್ಯಾಂನಲ್ಲಿ ಎಷ್ಟಿದೆ ನೀರು?

**ದಾವಣಗೆರೆ:**
ಮಧ್ಯ ಕರ್ನಾಟಕ ಜಿಲ್ಲೆಗಳ ಜೀವನಾಡಿ ಭದ್ರಾ ಜಲಾಶಯದ ಒಳಹರಿವು ಭಾನುವಾರ 14570 ಕ್ಯೂಸೆಕ್‌ಗೆ ಏರಿಕೆಯಾಗಿ ಡ್ಯಾಂ ನೀರಿನ ಮಟ್ಟ 139.3 ಅಡಿಗೆ ತಲುಪಿದೆ.

ಕಳೆದ ವರ್ಷ ಇದೇ ದಿನ ಜಲಾಶಯದ ನೀರಿನಮಟ್ಟ 141.2 ಅಡಿ ಇತ್ತು. ಮಳೆ ಇಲ್ಲದೆ ಬರ ಆವರಿಸಿದ್ದರಿಂದ ಒಳ ಹರಿವು ಕೇವಲ 864 ಕ್ಯೂಸೆಕ್ ಇತ್ತು. ಈ ವರ್ಷ ಮಳೆ ಕಾರಣಕ್ಕೆ ಪರಿಸ್ಥಿತಿ ಸುಧಾರಿಸಿ, ಒಳ ಹರಿವು ಏರಿಕೆ ಆಗಿ ಡ್ಯಾಂ ನೀರಿನ ಮಟ್ಟವೂ ಹೆಚ್ಚಳವಾಗಿದೆ. ಜಿಲ್ಲೆಯ ಭದ್ರಾ ಅಚ್ಚುಕಟ್ಟಿನ 65 ಸಾವಿರ ಹೆಕ್ಟೇರ್ ಪ್ರದೇಶದ ರೈತರಲ್ಲಿ ಖುಷಿ ತಂದಿದೆ.

ರೆಡ್ ಅಲರ್ಟ್ ಘೋಷಣೆ

ಮಲೆನಾಡಿನ ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಯಲ್ಲಿಮುಂದಿನ ಒಂದು ವಾರ ವ್ಯಾಪಕ ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ಈ ಜಿಲ್ಲೆಗಳಲ್ಲಿರೆಡ್ ಅಲರ್ಟ್ ಘೋಷಿಸಿದೆ. ಅದರಂತೆ ಚಿಕ್ಕಮಗಳೂರಿನ ಭದ್ರಾ ಜಲಾನಯನ ಪ್ರದೇಶವಾದ ಮೂಡಿಗೆರೆ, ಬಾಳೆಹೊನ್ನೂರು, ಕಳಸ, ಹೊರನಾಡು ಭಾಗದಲ್ಲೂಮಳೆ ಹೆಚ್ಚಾದರೆ ಸಹಜವಾಗಿಯೇ ಒಳ ಹರಿವು ಇನ್ನಷ್ಟು ಹೆಚ್ಚಿ, ಡ್ಯಾಂ ತುಂಬುವ ಆಶಾವಾದ ರೈತರಲ್ಲಿದೆ.

ಅಚ್ಚುಕಟ್ಟಿಗೆ ನೀರುಈಗ ಡ್ಯಾಂನಲ್ಲಿನ ಬಳಕೆಗೆ ಲಭ್ಯ ನೀರಿನ ಪ್ರಕಾರ ಮತ್ತು ಮುಂದಿನ ಮಳೆ ಭವಿಷ್ಯ ನೋಡಿದರೆ ಅಚ್ಚುಕಟ್ಟಿನ ಮುಂಗಾರು ಭತ್ತದ ಬೆಳೆಗೆ ನೀರು ಹರಿಸಬಹುದು. ಕಳೆದ ವರ್ಷ ಡ್ಯಾಂ ನೀರಿನ ಮಟ್ಟ ಇದೇ ಸ್ಥಿತಿಯಲ್ಲಿದ್ದಾಗಲೂ ಆನ್ ಅಂಡ್ ಆಫ್ ವ್ಯವಸ್ಥೆಯಲ್ಲಿಅಚ್ಚುಕಟ್ಟಿಗೆ ನೀರು ಹರಿಸಲಾಗಿತ್ತು. ಹಿಂದಿನ ವರ್ಷ ಡ್ಯಾಂನಲ್ಲಿನೀರಿನ ಕೊರತೆಯಿಂದ ಬೇಸಿಗೆ ಭತ್ತದ ಬೆಳೆಯಿಲ್ಲದೆ ಅಚ್ಚುಕಟ್ಟು ರೈತರು ಆರ್ಥಿಕ ನಷ್ಟಕ್ಕೆ ತುತ್ತಾಗಿದ್ದಾರೆ. ಹಾಗಾಗಿ ಮುಂಗಾರು ಹಂಗಾಮಲ್ಲೂಬೆಳೆ ಇಲ್ಲದಿದ್ದರೆ ರೈತರು ಹೆಚ್ಚಿನ ನಷ್ಟಕ್ಕೆ ಒಳಗಾಗಲಿದ್ದಾರೆ.

ನೆರೆಯ ತುಂಗಾ ಡ್ಯಾಂ ತುಂಬಿ ಅಚ್ಚುಕಟ್ಟಿಗೆ ನೀರು ಹರಿಸಲಾಗಿದೆ. ನದಿಗೂ 20 ಸಾವಿರ ಕ್ಯೂಸೆಕ್ ನೀರು ಬಿಡಲಾಗುತ್ತಿದೆ. ಹಾಗಾಗಿ ಭದ್ರಾ ಡ್ಯಾಂ ನೀರಾವರಿ ಸಲಹಾ ಸಮಿತಿ ಶೀಘ್ರ ಸಭೆ ಸೇರಿ ನೀರು ಲಭ್ಯತೆ ಮತ್ತು ಬಿಡುಗಡೆ ಬಗ್ಗೆ ಚರ್ಚಿಸಿ ಪ್ರಕಟಣೆ ನೀಡಬೇಕು ಎಂಬ ಒತ್ತಾಯ ಜಿಲ್ಲೆಯ ಭದ್ರಾ ಅಚ್ಚುಕಟ್ಟು ರೈತರು ಒತ್ತಾಯಿಸಿದ್ದಾರೆ.



## ಮಳೆಗಾಗಿ ಗುರ್ಜಿ ಪೂಜೆಗೆ ಮೊರೆ ಹೋದ ಗ್ರಾಮಸ್ಥರು; ಮಹಿಳೆಯರಿಂದ ವಿಶೇಷ ಪೂಜೆ

**ಗದಗ :** ಇಡೀ ಜಿಲ್ಲೆಯಲ್ಲಿ ಮುಂಗಾರು ಮಳೆ ಅಬ್ಬರಿಸುತ್ತಿದ್ದರೂ ಇಲ್ಲಿನ ಕೆಲವು ಗ್ರಾಮಗಳಲ್ಲಿ ಈವರೆಗೆ ಮಳೆಯೇ ಆಗಿಲ್ಲ. ಗ್ರಾಮಸ್ಥರು ಮಳೆಗಾಗಿ ಗುರ್ಜಿ ಪೂಜೆಗೆ ಮೊರೆ ಹೋಗಿದ್ದಾರೆ.

ಮಳೆ ಶುರುವಾಗಿ ಒಂದು ತಿಂಗಳು ಕಳೆದರೂ ರೋಣ ತಾಲೂಕಿನ ಹೊಳೆ ಆಲೂರ ಹೋಬಳಿಯಲ್ಲಿ ಗ್ರಾಮದಲ್ಲಿ ಮಳೆ ಇಲ್ಲ. ಹೀಗಾಗಿ ಮಳೆಗಾಗಿ ಹೋಬಳಿಯ ರೈತರು ಗುರ್ಜಿ ಪೂಜೆ ಮಾಡುತ್ತಿದ್ದಾರೆ. ಎಲ್ಲ ಕಡೆ ಮಳೆಯಾದರೂ ಈ ಗ್ರಾಮಗಳಲ್ಲಿ ಮಳೆ ಆಗದಕ್ಕೆ ಜನರಲ್ಲಿ ಆತಂಕ ಶುರುವಾಗಿದೆ. ಇದೀಗ ಮುನಿಸಿಕೊಂಡಿರುವ ವರುಣನಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ರೋಣ ತಾಲೂಕಿನ ಹೊಳೆ ಆಲೂರು ಹೋಬಳಿ ವ್ಯಾಪ್ತಿಯಲ್ಲಿಬರುವ ಕರಮುಡಿ, ಮಾಳವಾಡ, ಅಸೂಟಿ, ಮೇಲ್ಮಠ, ಸೋಮನಕಟ್ಟಿ, ಮೆಣಸಗಿ, ಗುಳಗಂದಿ, ಕರಕೀಕಟ್ಟಿ ಹೊಳೆಮಣ್ಣೂರ, ಗಾಡಗೋಳಿ, ಅಮರ ಗೋಳ, ಕುರುವಿನಕೊಪ್ಪ, ಹೊಳೆಹಡಗಲಿ, ಬಸರಕೋಡ, ಬಿ.ಎಸ್. ಬೇಲೇರಿ, ಬೆನಹಾಳ, ಹುನಗುಂಡಿ ಸುತ್ತಮುತ್ತಲಿನ ಪ್ರದೇಶದಲ್ಲಿ ಮಳೆ ಇಲ್ಲದ್ದರಿಂದ ರೈತರು ಹಾಗೂ ಸಾರ್ವಜನಿಕರು ಗುರ್ಜಿ ಪೂಜೆ ಮಾಡುತ್ತಿದ್ದಾರೆ.

ಮಳೆ ಬಾರದೆ ಇದ್ದಾಗ ಪೂರ್ವಜರ ಕಾಲದಿಂದಲೂ ಗ್ರಾಮೀಣ ಪ್ರದೇಶಗಳಲ್ಲಿ ಶತಮಾನಗಳಿಂದಲೂ ಆಚರಣೆಯಲ್ಲಿರುವ ಗುರ್ಜಿಪೂಜೆ ವಿಶಿಷ್ಟವಾಗಿದೆ. ವ್ಯಕ್ತಿ ಅಥವಾ ಬಾಲಕನ ತಲೆ ಮೇಲೆ ತವೆ ಇಟ್ಟು ಅದರ ಮೇಲೆ ಆಕಳ ಸಗಣೆಯಿಂದ ತಯಾರಿಸಿದ ಗುರ್ಜಿ ಹೊರಿಸಲಾಗುತ್ತದೆ.ಆ ನಂತರ ಗುರ್ಜಿ ಹೊತ್ತವನ ಹಿಂದೆ ಬಾಲಕರು ಗುರ್ಜಿ ಗುರ್ಜಿ ಎಂದು ಹಾಡು ಹೇಳುತ್ತಾ ಗ್ರಾಮದ ಪ್ರತಿ ಮನೆ ಮುಂದೆ ಹೋಗಿ ನಿಲ್ಲಬೇಕು. ಆಗ ಮನೆಯವರು ಬಂದು ಗುರ್ಜಿ ಹೊತ್ತವನ ತಲೆ ಮೇಲೆ ನೀರು ಸುರಿದು ಗುರ್ಜಿ ಪೂಜೆ ಮಾಡುತ್ತಾರೆ. ಈ ರೀತಿ ಪೂಜೆ ಮಾಡುವುದರಿಂದ ಮಳೆ ಆಗುವ ನಂಬಿಕೆ ಇವರಲ್ಲಿದೆ. ಇದಕ್ಕೂ ಮೊದಲು ಮಹಿಳೆಯರಿಂದ ಹಳ್ಳದ ಗಂಗವ್ವನಿಗೆ ಪೂಜೆ ಸಲ್ಲಿಸಿದ್ದಾರೆ.ಮುಂಗಾರು ಆರಂಭದಲ್ಲಿ ಸುರಿದ ಮಳೆಗೆ ಈ ಭಾಗದಲ್ಲಿ ಹೆಸರು, ಗೋವಿನಜೋಳ, ಮೆಣಸಿನಕಾಯಿ, ಈರುಳ್ಳಿ, ಎಳ್ಳು, ಹುರುಳಿ ಅನೇಕ ಬೆಳೆಗಳನ್ನು ಬಿತ್ತಿರುವ ರೈತರ ಬೆಳೆಗಳು ಒಣಗಿ ಹೋಗುತ್ತಿವೆ. ಸದ್ಯ ಎರಡು ಮೂರು ದಿನದಲ್ಲಿ ಮಳೆ ಆಗದೆ ಹೋದರೆ ಸಂಪೂರ್ಣ ಬೆಳೆ ಹರಗ ಬೇಕಾಗುತ್ತದೆ. ಬೀಜ, ಗೊಬ್ಬರ, ಕೂಲಿ, ಬಾಡಿಗೆ ಹೀಗೆ ಸಾಕಷ್ಟು ಖರ್ಚು ಮಾಡಿರುವ ರೈತರು ತಲೆ ಮೇಲೆ ಕೈ ಇಟ್ಟು ಮೋಡ ನೋಡುವಂತೆ ಮಾಡಿದೆ. ಮಳೆರಾಯನನ್ನು ನಂಬಿ ಬೀಜ, ಗೊಬ್ಬರಕ್ಕೆ ಸಾಕಷ್ಟು ಹಣ ಖರ್ಚು ಮಾಡಿ, ಬಿತ್ತನೆಗೆ ಬಾಡಿಗೆ ಕೊಟ್ಟು, ಕಸಕ್ಕೆ ಕೂಲಿ ಕೊಟ್ಟು ರೈತ ಕಂಗಾಲಾಗಿದ್ದಾನೆ.



## ಸಾರ್ವಕಾಲಿಕ ದಾಖಲೆ ಬರೆದ ಕಾಫಿ, ಕಾಳುಮೆಣಸು ದರ

ಕಾಫಿಗೆ ಉತ್ತಮ ಬೆಲೆ ಬಂದರೂ ಬೆಳೆಗಾರರಿಗೆ ಮಾತ್ರ ನಿರಾಸೆಯಾಗಿದೆ. ರಾಜ್ಯದ ಹಲವು ಕಾಫಿ ಬೆಳೆಗಾರರು ಈಗಾಗಲೇ ಕೊಯ್ಲು ಮಾಡಿದ್ದ ಕಾಫಿಯನ್ನು ಮಾರಾಟ ಮಾಡಿದ್ದಾರೆ. ಈಗ ಬೆಲೆ ಹೆಚ್ಚಾಗಿದ್ದು, ರೈತರಿಂದ ಖರೀದಿ ಮಾಡಿಟ್ಟುಕೊಂಡಿದ್ದ ಮಧ್ಯವರ್ತಿಗಳು ಮತ್ತು ಮಾರಾಟಗಾರರು ಹೆಚ್ಚಿನ ಲಾಭ ಪಡೆಯುತ್ತಿದ್ದಾರೆ. ನಮ್ಮ ದೇಶದಲ್ಲಿ ಕೃಷಿ ವಲಯ ಇರುವುದೇ ಹೀಗೆ. ಯಾವುದೇ ಬೆಳೆಗೆ ಬೆಲೆ ಕುಸಿತವಾದರೆ ನಷ್ಟ ಅನುಭವಿಸುವುದು ರೈತನಾದರೆ, ಹೆಚ್ಚಿನ ಬೆಲೆ ಬಂದಾಗ ಲಾಭ ಪಡೆಯುವುದು ಮಾತ್ರ ಮಧ್ಯವರ್ತಿಗಳು ಮತ್ತು ಮಾರಾಟಗಾರರೇ ಆಗಿರುತ್ತಾರೆ.

ಬ್ರೆಜಿಲ್, ವಿಯೆಟ್ನಾಂ ಸೇರಿದಂತೆ ಜಗತ್ತಿನಲ್ಲಿ ಕಾಫಿ ಬೆಳೆಯುವ ಪ್ರಮುಖ ದೇಶಗಳಿಂದ ನಿರೀಕ್ಷಿತ ಪ್ರಮಾಣದಲ್ಲಿ ಪೂರೈಕೆಯಾಗದೇ ಇರುವುದು ಬೆಲೆ ಹೆಚ್ಚಳಕ್ಕೆ ಕಾರಣವಾಗಿದೆ. ಭಾರತದ ಅದರಲ್ಲೂ ಕರ್ನಾಟಕ ಕಾಫಿಗೆ ಹೆಚ್ಚಿನ ಬೇಡಿಕೆ ಇದ್ದು ಏರಿಕೆಯತ್ತ ಮುಖಮಾಡಿದೆ. ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳು ರಾಜ್ಯದಲ್ಲಿ ಪ್ರಮುಖ ಕಾಫಿ ಬೆಳೆಯುವ ಪ್ರದೇಶಗಳಾಗಿವೆ. ಅದರಲ್ಲೂ ಚಿಕ್ಕಮಗಳೂರು ಕಾಫಿಗೆ ಭಾರಿ ಬೇಡಿಕೆ ಇದೆ.

ಕಾಳು ಮೆಣಸು ದರ ಕೂಡ ಹೆಚ್ಚಳ ಕಾಫಿ ದರ ಏರಿಕೆಯಾಗುವ ಜೊತೆಗೆ ಕಾಳು ಮೆಣಸು ದರ ಕೂಡ ಏರಿಕೆಯಾಗುತ್ತಿದ್ದು ಬೆಳೆಗಾರರಿಗೆ ಲಾಭ ತಂದುಕೊಡುವ ಭರವಸೆ ಮೂಡಿಸಿದೆ. ರೋಗ, ಕೀಟಬಾಧೆಯಿಂದ ಇಳುವರಿ ಕಡಿಮೆಯಾಗಿದೆ, ನಿರೀಕ್ಷಿತ ಪ್ರಮಾಣದಲ್ಲಿ ಇಳುವರಿ ಇಲ್ಲದೇ ಇದ್ದರೂ ಬೆಲೆ ಹೆಚ್ಚಾಗಿರುವುದರಿಂದ ನಷ್ಟದ ಭೀತಿ ಕಡಿಮೆಯಾಗಿದೆ. ಮೊದಲ ಬಾರಿಗೆ ಕಾಳು ಮೆಣಸು ಬೆಲೆ ಕ್ವಿಂಟಾಲ್‌ಗೆ 70,000 ರೂಪಾಯಿ ಮುಟ್ಟಿದೆ. ಮುಂದಿನ ದಿನಗಳಲ್ಲಿ ದರ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ.

## ಭದ್ರಾ ಡ್ಯಾಂ ದಾವಣಗೆರೆ ಜಿಲ್ಲೆಯ ರೈತರ ಜೀವನಾಡಿ.

**ದಾವಣಗೆರೆ:**

ಕಳೆದ ಬೇಸಿಗೆಯಲ್ಲಿ ಬೆಳೆ ಇಲ್ಲದೆ ಬೀಕರ ಬರದಿಂದ ಬಸವಳಿದ ರೈತರು ಭದ್ರಾ ಡ್ಯಾಂನ ಒಳಹರಿವಿನ ಪ್ರಮಾಣವನ್ನು ಚಾತಕ ಪಕ್ಷಿಗಳಂತೆ ಕಾಯುತ್ತಿದ್ದಾರೆ. ಇದುವರೆಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್ ಎಸ್ ಮಲ್ಲಿಕಾರ್ಜುನರವರಾಗಲಿ ಜಿಲ್ಲಾಧಿಕಾರಿಯವರಾಗಲಿ ರೈತರ ಹಿತರಕ್ಷಣೆ ಬಗ್ಗೆ ತುಟಿ ಪಿಟಿಕ್ ಎನ್ನದೆ ದಿವ್ಯ ಮೌನ ವಹಿಸಿದ್ದಾರೆ. ಭದ್ರಾ ಡ್ಯಾಂನ ಒಳಹರಿವಿನ ಪ್ರಮಾಣ ಹೆಚ್ಚಾಗಿರುವುದರಿಂದ ರೈತರಲ್ಲಿ ಸಂತಸ ತಂದಿದೆ. ಆದ್ದರಿಂದ ಇನ್ನಾದರೂ ಭದ್ರಾ ನೀರಾವರಿ ಸಲಹಾ ಸಮಿತಿ (ಐ.ಸಿ.ಸಿ) ಸಭೆ ನಡೆಸಿ, ನೀರು ಬಿಡಲು ತೀರ್ಮಾನಿಸಬೇಕು. ಬಿ ಎಂ ಸತೀಶ್, ಮಾಜಿ ಎಪಿಎಂಸಿ ಅಧ್ಯಕ್ಷರು, ಕೊಳೇನಹಳ್ಳಿ, ದಾವಣಗೆರೆ ತಾಲ್ಲೂಕು.



# 'ಹುಚ್ಚ' ಚಿತ್ರದಲ್ಲಿ ಫ್ರೆಂಡ್ ರೋಲ್ ಕೇಳಿದ್ದ ನಟ ದರ್ಶನ್‌ಗೆ ನಿರ್ಮಾಪಕರಿಂದ ಸಿಕ್ಕ ಉತ್ತರ ಹೀಗಿತ್ತು!

'ಚಾಲೆಂಜಿಂಗ್ ಸ್ಟಾರ್' ದರ್ಶನ್ ಅವರು ಸ್ಯಾಂಡಲ್‌ವುಡ್‌ನಲ್ಲಿ ಹೀರೋ ಆಗಿ ಕಾಲಿಡುವುದಕ್ಕೂ ಮುನ್ನ ಪೋಷಕ ಪಾತ್ರಗಳಲ್ಲಿ ಬಣ್ಣ ಹಚ್ಚಿದ್ದರು. 'ದೇವರ ಮಗ', 'ಮಹಾಭಾರತ' ಸಿನಿಮಾಗಳಲ್ಲಿ ಅವರು ಖಳ ಪಾತ್ರಗಳನ್ನು ಮಾಡಿದ್ದರು. ಅಂದಹಾಗೆ, ಅವರು ಕಿಚ್ಚ ಸುದೀಪ್ ಅವರ 'ಹುಚ್ಚ' ಸಿನಿಮಾದಲ್ಲಿ ಸ್ನೇಹಿತನ ಪಾತ್ರದ ಅವಕಾಶ ನೀಡುವಂತೆ ಕೇಳಿದ್ದು ನಿಮಗೆ ಗೊತ್ತಾ? ಹೌದು, ಎನ್ನುತ್ತಾರೆ 'ಹುಚ್ಚ' ಸಿನಿಮಾದ ನಿರ್ಮಾಪಕರಾದ ರೆಹಮಾನ್.

### 'ಹುಚ್ಚ' ಸಿನಿಮಾದಲ್ಲಿ ಸುದೀಪ್ ಸ್ನೇಹಿತನ ಪಾತ್ರ

2001ರಲ್ಲಿ 'ಹುಚ್ಚ' ಸಿನಿಮಾ ಆರಂಭವಾಗಿತ್ತು. 'ಸ್ಪರ್ಶ' ಸಿನಿಮಾದಿಂದ ಖ್ಯಾತಿ ಪಡೆದುಕೊಂಡಿದ್ದ ಸುದೀಪ್‌ಗೆ ಅದು ಹೀರೋ ಆಗಿ ಎರಡನೇ ಸಿನಿಮಾ. ಆಗಿನ್ನೂ ದರ್ಶನ್ ಅವರ 'ಮೆಜೆಸ್ಟಿಕ್' ಸಿನಿಮಾ ಶುರುವಾಗಿರಲಿಲ್ಲ. ಹಾಗಾಗಿ, ದರ್ಶನ್ ಅವರು ಅವಕಾಶಗಳ ತಲಾಷ್‌ನಲ್ಲಿದ್ದರು. 'ಹುಚ್ಚ' ಸಿನಿಮಾದಲ್ಲಿ ಸುದೀಪ್ ಅವರ ಜೊತೆಗೆ ಒಂದಷ್ಟು ಸ್ನೇಹಿತರ ಪಾತ್ರಗಳಿದ್ದವು. ಅದರಲ್ಲಿ ಒಂದು ಪಾತ್ರವನ್ನು ತಾರಕೇಶ್ ಪಟೇಲ್ ಮಾಡಿದ್ದರು. ಆದರೆ ಆ ಪಾತ್ರವನ್ನು ನನಗೆ ಕೊಡಿ ಎಂದಿದ್ದರಂತೆ ನಟ ದರ್ಶನ್.

### ನಿರ್ಮಾಪಕರು ದರ್ಶನ್ ಅವರಿಗೆ ಹೇಳಿದ್ದೇನು?

'ಹುಚ್ಚ' ಸಿನಿಮಾದ ಸೆಟ್‌ನಲ್ಲಿ ದರ್ಶನ್ ಅವರನ್ನು ನಿರ್ಮಾಪಕ ರೆಹಮಾನ್‌ಗೆ 'ಇವ್ರು ತೂಗುದೀಪ ಶ್ರೀನಿವಾಸ್ ಅವರ ಮಗ' ಅಂತ ಪರಿಚಯ ಮಾಡಿಸಲಾಯಿತು. ದರ್ಶನ್ ಇದ್ದ ಎತ್ತರ, ಕಲರ್ ನೋಡಿ, ರೆಹಮಾನ್‌ಗೆ ಶಾಕ್ ಆಗಿತ್ತು. ಇವ್ರು ಪಕ್ಕಾ ಹೀರೋ ಮೆಟಿರಿಯಲ್ ಅಂತ ಮನಸ್ಸಲ್ಲೇ ಅಂದುಕೊಂಡರು. ಆದರೆ ದರ್ಶನ್ ಅವರು, 'ಹುಚ್ಚ' ಚಿತ್ರದಲ್ಲಿನ ಹೀರೋ ಫ್ರೆಂಡ್ ಕ್ಯಾರೆಕ್ಟರ್ ಅನ್ನು ನಿರ್ದೇಶಕರಿಗೆ ಹೇಳಿ ಕೊಡಿಸಿ ಎಂದು ನಿರ್ಮಾಪಕರಿಗೆ ಕೇಳಿಕೊಂಡಿದ್ರಂತೆ. ಆದರೆ ಆ ಪಾತ್ರವನ್ನು ದರ್ಶನ್ ಅವರಿಂದ ಮಾಡಿಸುವುದಕ್ಕೆ ರೆಹಮಾನ್‌ಗೆ ಇಷ್ಟವಿರಲಿಲ್ಲ.

"ಆ ಪಾತ್ರ ಅಂತಹ ನಿಲ್ಲುವಂತಹ ಪಾತ್ರವೇನಲ್ಲ. ಸುಮ್ನೆ ನಾಲ್ವರು ಸ್ನೇಹಿತರಲ್ಲಿ ಒಬ್ಬ ಎನ್ನುವಂತಹ ಪಾತ್ರ. ಹಾಗಾಗಿ, ನೀವು ಹೀರೋ ಆಗಬೇಕು, ಫ್ರೆಂಡ್ಸ್ ಪಾತ್ರ ಎಲ್ಲಾ ಮಾಡಬಾರದು" ಅಂತ ನಿರ್ಮಾಪಕ ರೆಹಮಾನ್ ಅವರೇ ದರ್ಶನ್‌ಗೆ ಸಲಹೆ ನೀಡಿದ್ರಂತೆ. ಆ ಕಾರಣಕ್ಕೆ ಅವರಿಗೆ ಆ ಸಿನಿಮಾ ಚಾನ್ಸ್ ಸಿಕ್ಕಿರಲಿಲ್ಲ.

### 'ಮೆಜೆಸ್ಟಿಕ್'ನಲ್ಲಿ ಹೀರೋ ಆದ ದರ್ಶನ್

ಸುದೀಪ್ ನಟಿಸಿದ್ದ 'ಹುಚ್ಚ' ಸಿನಿಮಾವು 2001ರ ಜುಲೈನಲ್ಲಿ ತೆರೆಕಂಡರೆ, ಅದಾಗಿ ವರ್ಷ ತುಂಬುವುದರೊಳಗೆ ದರ್ಶನ್ ಕೂಡ ಎನಿಸಿಕೊಂಡರು. 2002ರಲ್ಲಿ ಫೆಬ್ರವರಿಯಲ್ಲಿ ತೆರೆಗೆ ಬಂದ 'ಮೆಜೆಸ್ಟಿಕ್' ಸಿನಿಮಾದಲ್ಲಿ ದರ್ಶನ್ ಹೀರೋ ಆಗಿ ಎಂಟ್ರಿ ನೀಡಿದರು. ಆ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಚಿನ್ನದ ಬೆಳೆ ತೆಗೆದಿತ್ತು. ದರ್ಶನ್‌ಗೂ ಅತ್ಯುತ್ತಮ ಹೆಸರು ತಂದು-ಕೊಡ್ತು.

### ಜೈಲಿನಲ್ಲಿರುವ ದರ್ಶನ್

ಸದ್ಯ ನಟ ದರ್ಶನ್ ಅವರು ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿದ್ದಾರೆ. ಜೂನ್ 11ರಂದು ನಟ ದರ್ಶನ್ ಅವರನ್ನು ಪೊಲೀಸರು ಬಂಧಿಸಿದ್ದರು. ಇದೀಗ ನ್ಯಾಯಾಂಗ ಬಂಧನಕ್ಕೆ ನೀಡಿ, ಕೋರ್ಟ್ ಆದೇಶಿಸಿದೆ. ಸದ್ಯ ಅವರು ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾರೆ. ಈ ಪ್ರಕರಣದಲ್ಲಿ ದರ್ಶನ್ ಜೊತೆಗೆ ಒಟ್ಟು 17 ಮಂದಿ ಅರೆಸ್ಟ್ ಆಗಿದ್ದಾರೆ.



## ಕೊಂಚ ತಗ್ಗಿದ ತರಕಾರಿಗಳ ದರ; ಗ್ರಾಹಕರು ದಿಲ್‌ಖುಷ್!

**ಗದಗ :** ಸುಮಾರು ಒಂದೂವರೆ ತಿಂಗಳಿಂದ ಏರುಮುಖದಲ್ಲಿದ್ದ ಟೊಮೇಟೊ ದರ ಸ್ವಲ್ಪ ಇಳಿಕೆಯಾಗಿದ್ದರಿಂದ ಗೃಹಿಣಿಯರಲ್ಲಿ ಸಂತಸ ಮೂಡಿದೆ.

ಈ ಹಿಂದೆ ಚಿಲ್ಲರೆ ದರ ಕೆಜಿಗೆ 90–120 ರೂ.ವರೆಗೆ ಏರಿಕೆಯಾಗಿದ್ದ ಟೊಮೇಟೊ, ಈಗ ಕೆಲವೆಡೆ 30 ರೂ.ಗೆ ಇಳಿದಿದೆ. ಇನ್ನೂ ಕೆಲವೆಡೆ 40–50 ರೂ.ಗೆ ಇಳಿಕೆಯಾಗಿದೆ. ಹೀಗಾಗಿ, ಗ್ರಾಹಕರಲ್ಲಿ ಸ್ವಲ್ಪ ಸಮಾಧಾನ ತಂದಿದೆ. ಟೊಮೇಟೊ ದರ ಏರಿಕೆಯಿಂದ ತತ್ತರಿಸಿ, ಹುಣಸೆಹಣ್ಣಿಗೆ ಮೊರೆ ಹೋಗಿದ್ದ ಗೃಹಿಣಿಯರು, ಈಗ ಟೊಮೇಟೊ ಮತ್ತೆ ಬಳಸಬಹುದೆಂದು ಖುಷಿಪಡುತ್ತಿದ್ದಾರೆ.

ಅವಳಿ ನಗರ ಸೇರಿದಂತೆ ಜಿಲ್ಲೆಯಲ್ಲಿ ಟೊಮೇಟೊ ಬೆಲೆ ಇಳಿಕೆಯಾಗುತ್ತಿದ್ದಂತೆ ಟೊಮೇಟೊ ಖರೀದಿಸಲು ಮಹಿಳೆಯರು ಮುಗಿಬಿದ್ದಿದ್ದಾರೆ. ಟೊಮೇಟೊ ಬೆಲೆ ಜಾಸ್ತಿಯಾದಾಗಿನಿಂದ ಮಹಿಳೆಯರು ಖರೀದಿಸಲು ಯೋಚಿಸುವಂತಾಗಿತ್ತು. ಸದ್ಯ ಈಗ ಬೆಲೆ ಇಳಿಕೆಯಾಗಿದ್ದು ಗ್ರಾಹಕರು ಫುಲ್‌ಖುಷಿಯಾಗಿದ್ದಾರೆ. ಬೆಲೆ ಏರಿಕೆಯಿಂದ ಮನೆಯಲ್ಲಿ ಎಷ್ಟೋ ದಿನದಿಂದ ಟೊಮೇಟೊ ಬಾತ್ ಮಾಡಿರಲಿಲ್ಲ. ಈಗ ಮಾಡಿ ತಿನ್ನುತ್ತೇವೆ ಎಂದು ಗ್ರಾಹಕರೊಬ್ಬರು ಸಂತಸ ವ್ಯಕ್ತಪಡಿಸಿದ್ದಾರೆ.

Printer by: S.K. Wadeyar, SUCHITHRA PRINTERS & PUBLISHER's#69 "VISPATHI", B,Block S.O.G. Colony Davangere-577005, Karnataka.
Publised by: S.K. Wadeyar #69 "VISPATHI", B,Block S.O.G. Colony Davangere-577005, Karnataka.
Owned by:S.K. Wadeyar #69 "VISPATHI", B,Block S.O.G. Colony Davangere-577005, Karnataka.
Editor by:S.K. Wadeyar #69 "VISPATHI", B,Block S.O.G. Colony Davangere-577005, Karnataka.